ಸಂಪುಟ : 10 ಸಂಚಿಕೆ: 264 ಪುಟ : 4+2 ಬೆಲೆ: 3.00 ಬುಧವಾರ ಡಿಸೆಂಬರ್ 03 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 264 Pages : 4+2 Price : 3.00 Wednesday December 03 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## 'ಯುವನಿಧಿ' ದೃಢೀಕರಣಕ್ಕೆ ಸೂಚನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳಲ್ಲಿ 5ನೇ ಯೋಜನೆ ಯುವನಿಧಿಯಲ್ಲಿ ಪದವೀದರರಿಗೆ 3 ಸಾವಿರ ರೂ ಮತ್ತು ಡಿಪ್ಲೋಮಾದಾರರಿಗೆ 1500 ರೂ.ಗಳನ್ನು ನಿರುದ್ಯೋಗಿ ಭತ್ಯೆಯಾಗಿ ನಿಡುತ್ತಿದ್ದು, ಜನೇವರಿ–2023ರ ನಂತರ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದ್ದು, ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿದೆ.

ಅಭ್ಯರ್ಥಿಗಳು ಈ ಪ್ರಯೋಜನವನ್ನು ಪ್ರತಿ ತಿಂಗಳು ಪಡೆಯಲು ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಾಗಿಲ್ಲವೆಂದು ಸ್ವಯಂ ಘೋಷಣೆಯನ್ನು ಪ್ರತಿ ತಿಂಗಳು 25ರೊಳಗಾಗಿ ಮಾಡಬೇಕು. ಸೇವಾಸಿಂಧು ಪೋರ್ಟಲ್ ಲಾಗಿನ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ, ದಾಖಲೆ ಪರಿಶೀಲನೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ–08372–220609 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## 'ವೋಟ್ ಚೋರಿ' ಸಮಾವೇಶದ ಕುರಿತು ಪೂರ್ವಭಾವಿ ಸಭೆ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**



2026ನೇ ಸಾಲಿನ ಪಶ್ಚಿಮ ಪದವೀಧರರ ಮತಕ್ಷೇತ್ರ ಚುನಾವಣೆ ಹಾಗೂ ದೆಹಲಿಯ ರಾಮಲೀಲಾ ಮೈದಾನದಲ್ಲಿ ಜರುಗಲಿರುವ ಬೃಹತ್ 'ವೋಟ್ ಚೋರಿ' ಸಮಾವೇಶದ ಕುರಿತು ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಡಿ. 4ರಂದು ಮಧ್ಯಾಹ್ನ 12ಕ್ಕೆ ಪೂರ್ವಭಾವಿ ಸಭೆ ಜರುಗಲಿದೆ.

ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸುವರು. ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ, ವೀಕ್ಷಕರಾದ ಎಸ್.ಜಿ. ನಂಜಯ್ಯನಮಠ, ವಿಧಾನ ಪರಿಷತ್ ಸದಸ್ಯರಾದ ಎಫ್. ಎಚ್. ಜಕ್ಕಪ್ಪನವರ, ಮೋಹನ್ ಅಸುಂಡಿ, ಎಂ.ಬಿ. ಸೌದಾಗಾರ ಭಾಗವಹಿಸುವರು.

ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಮತ್ತು ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯ ಆಕಾಂಕ್ಷಿಗಳು ಉಪಸ್ಥಿತರಿರುವರು.

ಗದಗ ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡರು, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳು, ಗದಗ ಜಿಲ್ಲಾ ಮುಂಚೂಣಿ ಘಟಕಗಳ ಅಧ್ಯಕ್ಷರು, ಗದಗ ಜಿಲ್ಲೆಯ ಎಲ್ಲಾ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಸದರಿ ಸಭೆಯಲ್ಲಿ ಭಾಗವಹಿಸಬೇಕು ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ, ಗದಗ ಬ್ಲಾಕ್ ಅಧ್ಯಕ್ಷರಾದ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಣವಿ ಗ್ರಾಮದಲ್ಲಿ ವಿವಿಧ ಕಾಮಗಾರಿಗಳ ಉದ್ಘಾಟನೆ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ

# ಬೆಂಬಲ ಬೆಲೆಯಡಿ 12ರಿಂದ 20 ಕ್ವಿಂಟಲ್ ಮೆಕ್ಕೆಜೋಳ ಖರೀದಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಂಬಲ ಬೆಲೆಯಡಿ ಪ್ರತಿ ರೈತನಿಂದ 5 ಕ್ವಿಂಟಾಲ್ ಮೆಕ್ಕೆಜೋಳವನ್ನು ಖರೀದಿ ಮಾಡಲು ನಿರ್ಧರಿಸಿತ್ತು. ಈ ಆದೇಶವನ್ನು ಪರಿಷ್ಕರಣೆ ಮಾಡಿ ರಾಜ್ಯ ಸರ್ಕಾರ ಕನಿಷ್ಠ 12ರಿಂದ ಗರಿಷ್ಠ 20 ಕ್ವಿಂಟಲ್ ಮೆಕ್ಕೆಜೋಳವನ್ನು ಬೆಂಬಲ ಬೆಲೆಯಡಿ ಪ್ರತಿ ಕ್ವಿಂಟಲ್‌ಗೆ 2400ರೂ.ಗಳಂತೆ ಖರೀದಿ ಪ್ರಾರಂಭಿಸಲಾಗುವುದು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ಜಿಲ್ಲೆಯ ಮುಳಗುಂದ ಸಮೀಪದ ಕಣವಿ ಗ್ರಾಮದಲ್ಲಿ ಮಂಗಳವಾರ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ ಸಚಿವರು ಮಾತನಾಡಿದರು.

ಗದಗ ತಾಲೂಕು ಮಲ್ಲಸಮುದ್ರ ಗ್ರಾಮದಲ್ಲಿ ಧಾರವಾಡ ಹಾಲು ಒಕ್ಕೂಟದ ಹಾಲು ಸಂಗ್ರಹಣ ಕೇಂದ್ರದಲ್ಲಿ ಮೆಕ್ಕೆಜೋಳ ಖರೀದಿ ನೋಂದಣಿ ಪ್ರಕ್ರಿಯೆ ಮಂಗಳವಾರ ಪ್ರಾರಂಭಿಸಲಾಗಿದೆ. ಪ್ರಸಕ್ತ ವರ್ಷ ರಾಜ್ಯದಲ್ಲಿ ಅಂದಾಜು 55 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಬಿತ್ತನೆ ಮಾಡಿ ಬೆಳೆ ಬೆಳೆದಿದ್ದು, ಖರೀದಿ ಪ್ರಕ್ರಿಯೆಯನ್ನು ಹೇಗೆ ಮಾಡಬೇಕೆಂಬುದು ಸರಕಾರಕ್ಕೆ ಒಂದು ದೊಡ್ಡ ಸವಾಲಾಗಿತ್ತು. ರೈತರ ಕಷ್ಟಕ್ಕೆ ಸರ್ಕಾರ ಹೇಗಾದರೂ ಮಾಡಿ ಸ್ಪಂದಿಸಬೇಕು ಎಂಬ ಉದ್ದೇಶದಿಂದ ಪ್ರತಿ ರೈತನಿಂದ ಕನಿಷ್ಠ 12 ಕ್ವಿಂಟಲ್, ಗರಿಷ್ಠ 20 ಕ್ವಿಂಟಲ್ ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿ ಮಾಡಲಾಗುವುದು ಎಂದರು.

ಅಂದಾಜು 33 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣವಾದ ಹಳ್ಳಿ ಗ್ರಾಮೀಣ ಸಂತೆ ಕಟ್ಟಡದ ಉದ್ಘಾಟನೆ, ರಂಗ ಮಂದಿರ ಹಾಗೂ ನಾಟಕ ಮನೆಯ ಉದ್ಘಾಟನೆ, ವಿ.ಪ ಸದಸ್ಯ ಎಸ್.ವಿ. ಸಂಕನೂರ ಒದಗಿಸಿದ ಅನುದಾನದಲ್ಲಿ ನಿರ್ಮಾಣವಾದ ಶುದ್ಧ ಕುಡಿಯುವ ನೀರಿನ ಘಟಕವನ್ನು ಸಚಿವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಗ್ರಾ.ಪಂ ಅಧ್ಯಕ್ಷೆ ಹಾಲವ್ವ ಕುರಿ, ಉಪಾಧ್ಯಕ್ಷೆ ರೇಣವ್ವ ತಳವಾರ, ಗದಗ ತಾ.ಪಂ ಮಾಜಿ ಅಧ್ಯಕ್ಷ ಶರಣ ಬಸನಗೌಡ ಪಾಟೀಲ, ಬಾಬುಸಾಬ ಕಿಲ್ಲೆದಾರ, ಬಸವರಾಜ ಬಂದಕ್ಕನವರ, ಪರಪ್ಪ ಕೋಳಿವಾಡ, ಯಲ್ಲಪ್ಪ ಕೋರಿ, ಪ್ರಕಾಶ ಕುರ್ತಕೋಟಿ, ಗಂಗಣ್ಣ ಗಡಾದ, ಕೃಷ್ಣ ನಾಗಲೋಟಿ, ಎಸ್.ವಾಯ್. ಕೋರಿ, ಶರೀಫ ದೊಡ್ಮನಿ, ಅಕ್ಕಮಹಾದೇವಿ ಬಳಿಗಾರ, ಪಾರವ್ವ ಕುರ್ತುಕೋಟಿ, ಮಂಜುನಾಥ ಕೋರಿ, ಶಂಕ್ರಪ್ಪ ಕೋಳಿವಾಡ, ಪ್ರಭು ಹುಡೇದ, ಬಿ.ಟಿ. ಸೋಮರಡ್ಡಿ, ಶಿವಾನಂದ ಮಾದಣ್ಣವರ, ನಿಂಗಪ್ಪ ಛಲವಾದಿ ಮತ್ತಿತರರು ಇದ್ದರು.

> ಕಣವಿ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕ್ರೀಡಾ ಮೈದಾನ ಹಾಗೂ ಹೈಮಾಸ್ಟ್ ವಿದ್ಯುತ್ ದೀಪ ಉದ್ಘಾಟಿಸಲಾಯಿತು. ಕ್ರೀಡಾಕೂಟದಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಲಾಯಿತು. ಅಂದಾಜು 16 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣವಾದ ಗ್ರಾಮ ಪಂಚಾಯಿತಿ ಉಪಕಾರ್ಯಾಲಯವನ್ನು ಸಚಿವ ಹೆಚ್.ಕೆ. ಪಾಟೀಲ ಉದ್ಘಾಟಿಸಿದರು. ಗ್ರಾಮದ ಹೈಸ್ಕೂಲ್ ಮೈದಾನದಲ್ಲಿ 41 ಲಕ್ಷ ರೂಗಳ ವೆಚ್ಚದಲ್ಲಿ ಮೂರು ಕೊಠಡಿಗಳನ್ನು ಉದ್ಘಾಟಿಸಲಾಯಿತು. ಅಂದಾಜು 18 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣವಾದ ಅಂಬೇಡ್ಕರ್ ಭವನ ಉದ್ಘಾಟನೆಯನ್ನು ಇದೇ ಸಂದರ್ಭದಲ್ಲಿ ಸಚಿವರು ನೆರವೇರಿಸಿದರು.

### ಕಾಂಗ್ರೆಸ್ ಪ್ರಣಾಳಿಕೆ ದಹಿಸಿ ಅತಿಥಿ ಉಪನ್ಯಾಸಕರ ಆಕ್ರೋಶ

# ನಮ್ಮ ಹೋರಾಟ ಮತ್ತೊಂದು ನರಗುಂದ ಬಂಡಾಯವಾದೀತು!




**■ವಿಜಯಸಾಕ್ಷಿ ಸುದ್ದಿ, ಗದಗ**

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ನಗರದಲ್ಲಿ ಕಳೆದ 8 ದಿನಗಳಿಂದ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಅನಿರ್ದಿಷ್ಟಾವಧಿ ಪ್ರತಿಭಟನೆ ಪಟ್ಟು ಸಡಿಲಿಸುವ ಲಕ್ಷಣಗಳು ಗೋಚರಿಸುತ್ತಿಲ್ಲ. ಮಂಗಳವಾರ ಕಾಂಗ್ರೆಸ್ ಪ್ರಕಟಿಸಿದ್ದ ಪ್ರಣಾಳಿಕೆ ಪಟ್ಟಿಯನ್ನು ದಹಿಸಿ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆಯ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಕಲ್ಮನಿ, ಸುಮಾರು ಹತ್ತು–ಹದಿನೈದು ವರ್ಷಗಳಿಂದ ಕಡಿಮೆ ಗೌರವಧನಕ್ಕೆ ಸರಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರು ಇಂದು ಅಕ್ಷರಶಃ ಬೀದಿಗೆ ಬೀಳುತ್ತಿದ್ದಾರೆ. ಇದಕ್ಕೆ ಸರಕಾರ ಕೈಗೊಂಡಿರುವ ಅಮಾನವೀಯ, ಅವೈಜ್ಞಾನಿಕ ನೀತಿಯೇ ಕಾರಣ ಎಂದು ಕಿಡಿ ಕಾರಿದರು.

ವಿಧಾನಸಭೆ ಚುನಾವಣೆಗೂ ಮುನ್ನ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ರಾಜ್ಯದ ಸರಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ನೀಡುವ ಭರವಸೆ ನೀಡಿತ್ತು. ಈವರೆಗೆ ಪ್ರಣಾಳಿಕೆಯ ಬಹುತೇಕ ಅಂಶಗಳ ವಿಚಾರದಲ್ಲಿ ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಕಾಂಗ್ರೆಸ್ ಸರಕಾರ ನುಡಿದಂತೆ ನಡೆದಿದೆ.

ಆದರೆ ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ವಿಷಯದಲ್ಲಿ ಉದಾಸೀನ ತಾಳಿರುವುದು ಸರಿಯಲ್ಲ ಎಂದು ದೂರಿದರು.

ಅತಿಥಿ ಉಪನ್ಯಾಸಕರ ಹೋರಾಟಕ್ಕೆ ಮುಂಡರಗಿ ಹೋರಾಟ ಸಮಿತಿಯ ಅಧ್ಯಕ್ಷ ಬಸವರಾಜ ದೇಸಾಯಿ, ಪಂಚಾಕ್ಷರಿ ಗವಾಯಿಗಳ ಕಾಲೇಜಿನ ಪ್ರಾಚಾರ್ಯ ಡಾ. ಆರ್.ಎಸ್. ದಂಡತಿ ಪ್ರತಿಭಟನೆಯಲ್ಲಿ ಪಾಲ್ಗೊಂಡು ಬೆಂಬಲ ಸೂಚಿಸಿದರು. ಹೋರಾಟದಲ್ಲಿ ವಿಜಯಪುರದ ರಾಮನಗೌಡ ಕಲ್ಲಿ, ಬೆಳ್ತಂಗಡಿಯ ಸಂತೋಷಕುಮಾರ, ಧರ್ಮಸ್ಥಳದ ಗಿರೀಶ್ ನಾಯಕ, ಉಡುಪಿಯ ಪವನಕುಮಾರ, ಧಾರವಾಡದ ದಾನೇಶ್ವರಿ, ಶಿರೂರು, ಕುಂದಗೋಳ, ಮಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳ ಅತಿಥಿ ಉಪನ್ಯಾಸಕರು ಇದ್ದರು.

> ಕೂಡಲೇ ಸರಕಾರ ಸೇವಾನುಭವ ಇರುವ ಅತಿಥಿ ಉಪನ್ಯಾಸಕರ ಸೇವೆಗೆ ಭದ್ರತೆ ನೀಡಬೇಕು. ಈಗ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯ ಕೌನ್ಸೆಲಿಂಗ್‌ನ್ನು ತಕ್ಷಣ ನಿಲ್ಲಿಸಬೇಕು. ಇಲ್ಲದಿದ್ದರೆ ಈ ಹೋರಾಟ ಮತ್ತೊಂದು ನರಗುಂದ ಬಂಡಾಯವಾಗುವ ನಿಟ್ಟಿನಲ್ಲಿ ಚಳವಳಿ ರೂಪಿಸಬೇಕಾಗುತ್ತದೆ. ಬೆಳಗಾವಿ ಅಧಿವೇಶನ ಆರಂಭ ಆಗುವುದರೊಳಗೆ ನಮ್ಮ ಬೇಡಿಕೆ ಈಡೇರಬೇಕು. ಇಲ್ಲದಿದ್ದರೆ ಬೆಳಗಾವಿಯಲ್ಲಿ ನಡೆಯಲಿರುವ ನಮ್ಮ ಹೋರಾಟ ಸರಕಾರಕ್ಕೆ ನಡುಕ ಹುಟ್ಟಿಸುವುದು ನಿಶ್ಚಿತ ಎಂದು ಡಾ. ಹನುಮಂತಗೌಡ ಕಲ್ಮನಿ ಎಚ್ಚರಿಕೆ ನೀಡಿದರು.

## 24 ಗಂಟೆಗಳಲ್ಲಿ ಕಳ್ಳತನ ಪ್ರಕರಣ ಪತ್ತೆ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ಪಟ್ಟಣದ ವಿದ್ಯಾನಗರದಲ್ಲಿ ನ. 28ರಂದು ಪಾರವ್ವ ಹಳ್ಳಿಕೇರಿ ಇವರ ಮನೆಯ ಕೀಲಿ ತೆಗೆದು ಮನೆಯ ಟ್ರೆಝುರಿಯಲ್ಲಿ ಇಟ್ಟಿದ್ದ ಬಂಗಾರದ ಆಭರಣಗಳನ್ನು ಕಳ್ಳತನ ಮಾಡಿಕೊಂಡು ಹೋಗಿದ್ದರ ಬಗ್ಗೆ ನ. 30ರಂದು ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಎಸ್‌ಪಿ ರೋಹನ್ ಜಗದೀಶ, ಡಿಎಸ್‌ಪಿ ಮುರ್ತುಜಾ ಖಾದ್ರಿ ಅವರ ಮಾರ್ಗದರ್ಶನದಲ್ಲಿ ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ಈರಪ್ಪ ರಿತ್ತಿ ಅವರನ್ನೊಳಗೊಂಡ ವಿಶೇಷ ತಂಡ ರಚಿಸಿ ಆರೋಪಿತರ ಪತ್ತೆ ಕಾರ್ಯ ಕೈಗೊಂಡಿದ್ದು, ಡಿ. 1ರ ಬೆಳಿಗ್ಗೆ 8.30 ಗಂಟೆಗೆ ಶಿರಹಟ್ಟಿ ಬಸ್ ನಿಲ್ದಾಣದಲ್ಲಿ ಅನುಮಾನಾಸ್ಪದ ರೀತಿಯಲ್ಲಿ ವರ್ತಿಸುತ್ತಿದ್ದ ಆರೋಪಿತನನ್ನು ವಿಚಾರಿಸಿದಾಗ ಸಮರ್ಪಕ ಉತ್ತರ ನೀಡದೆ ಇದ್ದಾಗ ಠಾಣೆಗೆ ಕರೆದುಕೊಂಡು ಹೋಗಿ ವಿಚಾರಿಸಲಾಗಿ, ಕಳ್ಳತನ ಮಾಡಿದ ಬಗ್ಗೆ ಒಪ್ಪಿಕೊಂಡಿದ್ದಾನೆ.

ಕಳ್ಳತನ ಮಾಡಿದ ಎಲ್ಲ ಬಂಗಾರದ ಆಭರಣಗಳನ್ನು 24 ಗಂಟೆಗಳಲ್ಲಿ ಪೊಲೀಸರು ಜಪ್ತಿ ಮಾಡಿದ್ದಾರೆ. ಕಳ್ಳತನ ಪತ್ತೆ ಹಚ್ಚುವಲ್ಲಿ ಯಶಸ್ವಿಯಾದ ಶಿರಹಟ್ಟಿ ಪೊಲೀಸ್ ಠಾಣೆಯ ಈರಪ್ಪ ರಿತ್ತಿ, ಶೇಖರ ಕಡಬಿನ, ಸಿಬ್ಬಂದಿ ಎಂ.ಎ. ಸದರನ್ನವರ, ಹನಮಂತ ದೊಡ್ಡಮನಿ, ಬಸವರಾಜ ಮುಳಗುಂದ, ಠಾಕೂರ ಕಾರಭಾರಿ, ಚರಂತ ಗುಂಡೂರಮಠ, ರಾಜೇಶ ವೀರಾಪೂರ ಇವರುಗಳ ಉತ್ತಮ ಕಾರ್ಯಕ್ಕೆ ಎಸ್‌ಪಿ ರೋಹನ್ ಜಗದೀಶ ಮೆಚ್ಚುಗೆ ವ್ಯಕ್ತಪಡಿಸಿ ಬಹುಮಾನ ಘೋಷಿಸಿದ್ದಾರೆ.

## ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ ವಿಜ್ಞಾನ ಮತ್ತು ತಂತ್ರಜ್ಞಾನ ಅಥವಾ ಆರ್ಥಿಕತೆಯ ಯಾವುದೇ ವಿಭಾಗದಿಂದ ಮೂಡಿದ ಜನಸಾಮಾನ್ಯರ, ಅದರಲ್ಲೂ ಗ್ರಾಮೀಣ ಪ್ರದೇಶದ ಜನಜೀವನವನ್ನು ಪರಿವರ್ತಿಸಲು ಸಹಾಯಕವಾದ ಅಥವಾ ಉದ್ಯಮಗಳು ಹಾಗೂ ಉದ್ಯೋಗ ಸೃಷ್ಟಿಗೆ ಕಾರಣವಾದ ಅನುಕರಣೀಯ ಆವಿಷ್ಕಾರಗಳು/ ಪರಿಹಾರಗಳನ್ನು ಪ್ರತಿ ವರ್ಷ ಗುರುತಿಸಿ ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಬೋಧಕರು ಮತ್ತು ಜನಸಾಮಾನ್ಯರಿಂದ ಆವಿಷ್ಕಾರ, ನಾವೀನ್ಯತೆ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸ್ನಾತಕೋತ್ತರ ವಿದ್ಯಾರ್ಥಿಗಳ ಅತ್ಯುತ್ತಮ ಆವಿಷ್ಕಾರ/ನಾವೀನ್ಯತೆಗೆ ಪ್ರೊ. ಯು.ಆರ್. ರಾವ್ ಪುರಸ್ಕಾರ, ಪದವಿ ವಿದ್ಯಾರ್ಥಿಗಳ ಅತ್ಯುತ್ತಮ ಆವಿಷ್ಕಾರ/ನಾವೀನ್ಯತೆಗೆ ಡಾ. ಎಸ್.ಕೆ. ಶಿವಕುಮಾರ್ ಪುರಸ್ಕಾರ, ಬೋಧಕರು ಹಾಗೂ ಜನಸಾಮಾನ್ಯರ ಅತ್ಯುತ್ತಮ ಆವಿಷ್ಕಾರ/ನಾವೀನ್ಯತೆಗೆ ಪ್ರೊ. ಎಸ್. ಅಯ್ಯಪ್ಪನ್ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಮೇಲ್ಕಂಡ ಪುರಸ್ಕಾರಕ್ಕೆ 10 ಸಾವಿರ ರೂ.ಗಳ ನಗದು ಬಹುಮಾನ ಹಾಗೂ ಪ್ರಶಸ್ತಿಪತ್ರವನ್ನು ನೀಡಲಾಗುವುದು. ಆಸಕ್ತರು ಡಿಸೆಂಬರ್ 31ರೊಳಗಾಗಿ ಅಕಾಡೆಮಿಯ ವೆಬ್‌ಸೈಟ್‌ನಲ್ಲಿ ( https://kstacademy.in ) ನೀಡಿರುವ ಮಾರ್ಗಸೂಚಿಯನ್ವಯ ಆನ್‌ಲೈನ್ ಮೂಲಕ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಶ್ರೀನಿವಾಸು (ಮೊ. ಸಂ–9620767819) ಹಾಗೂ ಚಂದ್ರಶೇಖರ ಮೂರ್ತಿ (ಮೊ.9686449019/080–29721550) ಇವರನ್ನು ಸಂಪರ್ಕಿಸಬಹುದಾಗಿದೆ.

## ಗ್ರಾಮೀಣ ಜನರ ಬದುಕು ಹಸನಾಗಲಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಗ್ರಾಮೀಣ ಜನರ ಜೀವನದಲ್ಲಿ ಸಾಮಾಜಿಕವಾಗಿ ಹಾಗೂ ಶೈಕ್ಷಣಿಕವಾಗಿ ಸರ್ಕಾರದಿಂದ ನೀಡಿರುವ ಎಲ್ಲ ಸವಲತ್ತುಗಳ ಸದುಪಯೋಗ ಪಡೆದುಕೊಂಡು, ಅಭಿವೃದ್ಧಿ ಕಾರ್ಯಗಳನ್ನು ಬೆಳವಣಿಗೆಗೆ ಊರುಗೋಲನ್ನಾಗಿಸಿ ಜನರ ಬದುಕುಒಟ್ಟಾರೆ ಹಸನಾಗಬೇಕು. ಅಂದಾಗ ಮಾತ್ರ ಮಹಾತ್ಮ ಗಾಂಧಿಜಿಯವರು ಕಂಡ ರಾಮ ರಾಜ್ಯದ ಕನಸು ನನಸಾಗುತ್ತದೆ. ಈ ನಿಟ್ಟಿನಲ್ಲಿ ಸರ್ಕಾರ ವಿಶೇಷ ಅವಕಾಶಗಳನ್ನು, ಅನುದಾನವನ್ನು ನೀಡಿ ಪ್ರೋತ್ಸಾಹಿಸುತ್ತಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಕಣವಿ ಗ್ರಾಮದಲ್ಲಿ ಮಂಗಳವಾರ ನೂತನ ಗ್ರಾಮ ಪಂಚಾಯಿತಿ ಉಪಕಾರ್ಯಾಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಉತ್ತಮವಾಗಿ ಬದುಕಬೇಕು. ಆ ನಿಟ್ಟಿನಲ್ಲಿ ಸರ್ಕಾರದ ವಿವಿಧ ಯೋಜನೆಗಳು ಜನರ ಮನೆ ಬಾಗಿಲಿಗೆ ತಲುಪುತ್ತಿದ್ದು, ಪ್ರತಿಯೊಬ್ಬರೂ ಜವಾಬ್ದಾರಿಯುತವಾಗಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಗ್ರಾಮೀಣ ಭಾಗದ ಶೈಕ್ಷಣಿಕ ಸಂಸ್ಥೆಗಳು ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಿ, ಪಠ್ಯ–ಪಠ್ಯೇತರ ಚಟುವಟಿಕೆಗಳಲ್ಲಿ ಬಡಮಕ್ಕಳು, ಪ್ರತಿಭಾವಂತರು ಬೆಳವಣಿಗೆ ಹೊಂದುವಂತಾಗಬೇಕು. ಗ್ರಾಮದ ಅಭ್ಯುದಯಕ್ಕೆ ಗ್ರಾಮಸ್ಥರ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ರಚನಾತ್ಮಕ ಕೆಲಸಗಳನ್ನು ಮಾಡಲಿ ಎಂದರು.

**'ವಿಶ್ವ ಅಂಗವಿಕರ ದಿನಾಚರಣೆ' ನಿಮಿತ್ತ ವಿಶೇಷ ಲೇಖನ**

# ಮೌನದ ನಾಟಕ, ಮಹಾ ಸಂದೇಶ



ಸಮಾಜದಲ್ಲಿ ಮಹಿಳೆಯರ ಮೇಲಿನ ಹಿಂಸೆ, ಶೀಲಹರಣ, ಕಿರುಕುಳ, ಅನ್ಯಾಯ ಇವೆಲ್ಲವೂ ನಿತ್ಯ ಜರುಗುವ ದಾರುಣ ಘಟನೆಗಳಾಗಿರುವ ಸಂದರ್ಭದಲ್ಲಿ, ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ನರೇಗಲ್ಲ ಪಟ್ಟಣದ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಕಿವುಡ ಮತ್ತು ಮೂಗ ಮಕ್ಕಳ ವಸತಿಗೃಹ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮಕ್ಕಳು ತಮ್ಮ ಬಾಲಹೃದಯದಿಂದಲೇ ಸಮಾಜದತ್ತ ದೊಡ್ಡ ಸಂದೇಶವನ್ನು ನೀಡುತ್ತಿದ್ದಾರೆ. ಮಾತಿಲ್ಲ, ಶಬ್ದವಿಲ್ಲ. ಆದರೆ ಅವರ ಕಣ್ಣಿನ ಭಾಷೆ, ಕೈಬರಹದ ಸಂವೇದನೆ ಮತ್ತು ಪಾತ್ರಧಾರಿಗಳ ಜೀವಂತಿಕೆ ಸಮಾಜದ ಹೃದಯಕ್ಕೆ ನೇರವಾಗಿ ಮುಟ್ಟುತ್ತಿದೆ. ಕಳೆದ 4–5 ವರ್ಷಗಳಿಂದ 'ಕಡ್ಲಿಮಟ್ಟಿ ಕಾಶಿಬಾಯಿ' ಎಂಬ ನಾಟಕವನ್ನು ನಿರಂತರವಾಗಿ ಪ್ರದರ್ಶಿಸುತ್ತಾ, ಮಹಿಳೆಯರ ಗೌರವ ರಕ್ಷಣೆಯ ಬಗ್ಗೆ ಆಳವಾದ ಅರಿವು ಮೂಡಿಸುತ್ತಿರುವ ಇವರ ಪ್ರಯತ್ನ ಇಂದು ರಾಜ್ಯದಾದ್ಯಂತ ಪ್ರಶಂಸೆಗೆ ಪಾತ್ರವಾಗುತ್ತಿದೆ.

ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯವನ್ನು ಶಬ್ದರಹಿತ ಪ್ರದರ್ಶನದ ಮೂಲಕ ತೋರಿಸುವ ಈ ನಾಟಕದಲ್ಲಿ, ಕಣ್ಣು ಮತ್ತು ಚಲನೆಯೇ ಸಂವಾದ. ಅದರಲ್ಲಿರುವ ನೋವು, ಕೋಪ, ದಿಕ್ಕು ತೋಚದ ಸ್ಥಿತಿ, ಹೆಣ್ಣಿನ ಧೈರ್ಯ ಇವೆಲ್ಲವೂ ಪ್ರೇಕ್ಷಕನ ಮನಸ್ಸನ್ನು ನಡುಗಿಸುತ್ತವೆ. ಮಾತಿಲ್ಲದ ಮಕ್ಕಳಿಂದ ಅಭಿಮತ ಹೇಳಿಸುವಷ್ಟು ಬಲವಾದ ಭಾಷಾಶಕ್ತಿ ಇನ್ನಾವುದಕ್ಕೂ ಇಲ್ಲ ಎನ್ನುವಂತೆ ನಾಟಕ ಮುಂದುವರಿಯುತ್ತದೆ.

ಕಡ್ಲಿಮಟ್ಟಿ ಗ್ರಾಮದ ಸಾಮಾನ್ಯ ಹೆಣ್ಣಾದ ಕಾಶಿಬಾಯಿ ಮನೆತನದ ಒತ್ತಡದಿಂದ ಹಿಡಿದು, ಸಮುದಾಯದ ಕುಟಿಲ ನೋಟ, ಮಹಿಳೆಯನ್ನು ಕೇವಲ ವಸ್ತುವೆಂದು ನೋಡುವ ಅಭದ್ರ ಮನೋಭಾವ ಇವೆಲ್ಲವನ್ನೂ ತನ್ನ ನಿಸ್ಸಹಾಯಕ ಮೌನದಲ್ಲಿ ನಿಲ್ಲಿಸುವ ಪಾತ್ರ. ಆದರೆ ಈ ಮಕ್ಕಳ ಪ್ರದರ್ಶನದಲ್ಲಿ ಕಾಶಿಬಾಯಿ ಮೌನದೊಳಗೆ ನಿಂತು ಕಿರುಚುತ್ತಾಳೆ. ಆ ಕಿರುಚುವಿಕೆ ಪ್ರೇಕ್ಷಕರ ಕಿವಿಗೆ ನೇರವಾಗಿ ತಾಗುತ್ತದೆ. ಪಾತ್ರದ ಮುಖಾಂತರ ತೋರಿಸುವ ದೃಶ್ಯದಲ್ಲಿ ಮಹಿಳೆಯರ ಹಕ್ಕನ್ನು ಕಿತ್ತುಕೊಳ್ಳುವ ಸಮಾಜದ ದುರ್ಗಂಧವೇ ಮರುಳುತ್ತದೆ.

ಶಾಲೆಯ ಶಿಕ್ಷಕರು ಈ ಮಕ್ಕಳಿಗೆ ಕಲೆಯನ್ನು ಕಲಿಸುವಾಗ, ಕೇವಲ ಅಭಿನಯವಲ್ಲ, ಸಮಾಜ ಬದಲಾವಣೆಗೂ ಕಾರಣರಾಗಬೇಕು ಎಂಬ ಮೌಲ್ಯ ಕಲಿಸುತ್ತಿದ್ದಾರೆ. ಪ್ರತಿ ದೃಶ್ಯದಲ್ಲೂ ಪ್ರತಿಯೊಬ್ಬ ಮಗು ತನ್ನ ಮೌನದ ಮೂಲಕ ಮಾತನಾಡುತ್ತದೆ. ನಮ್ಮನ್ನು ಅಂಗವಿಕಲರು ಎಂದು ನೋಡುವುದನ್ನು ನಿಲ್ಲಿಸಿ, ನಮ್ಮ ಸಾಮರ್ಥ್ಯವನ್ನು ನೋಡಿ ಎಂಬಂತೆ. ಈ ನಾಟಕವನ್ನು ನೋಡಿದ ಅನೇಕರು ನಂತರ ಮಹಿಳೆಯರ ವಿರುದ್ಧ ನಡೆಯುವ ಹಿಂಸೆಗೊಂದು ಹೊಣೆಗಾರಿಕೆಯಿಂದ ಯೋಚಿಸುವುದಾಗಿ ಹೇಳಿರುವುದು ಈ ಕಲೆಯ ಗೆಲುವು.

> ಕರ್ನಾಟಕ ನಾಟಕ ಅಕಾಡೆಮಿ ವತಿಯಿಂದ ನಿರ್ದೇಶಕರಿಗೆ ಸಂಭಾವನೆ ನೀಡುತ್ತದೆ. ಕಿವುಡ ಮತ್ತು ಕಿವುಡ–ಮೂಗ ಮಕ್ಕಳು ಪ್ರದರ್ಶನಗೈಯುತ್ತಿರುವ ನಾಟಕಕ್ಕೆ ಹೆಚ್ಚಿನ ಪ್ರೇರಣೆಯ ಅಗತ್ತವಿದೆ. ಈಗಾಗಲೇ ಸಂಸ್ಥೆಯ ಎಲ್ಲಾ ಶಿಕ್ಷಕರ ಬಳಗ ವಿದ್ಯಾರ್ಥಿಗಳಿಗೆ ಓದಿನ ಜೊತೆಗೆ ಕಲೆಯನ್ನು ಬೆಳೆಸುವಲ್ಲಿ ನಿರಂತರವಾಗಿದ್ದಾರೆ.
>
> **– ಆರ್.ಕೆ. ಬಾಗವಾನ.**
> ಶಿಕ್ಷಕ, ನಾಟಕ ಪರಿಕಲ್ಪನೆ ಹಾಗೂ ವಿನ್ಯಾಸಗಾರ.

> 1990ರಲ್ಲಿ ಪ್ರಾರಂಭವಾದ ಈ ಕಿವುಡ ಮಕ್ಕಳ ವಸತಿಯುತ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಶಿಕ್ಷಕರು ಮಕ್ಕಳಿಗೆ ಕೇವಲ ಕಲೆಯನ್ನು ಕಲಿಸಿಲ್ಲ, ಸಮಾಜದ ಬಾಧ್ಯತೆ ಮತ್ತು ಮಾನವೀಯತೆಯ ಪಾಠವನ್ನೂ ನೀಡುತ್ತಿದ್ದಾರೆ. ಮೂರು ನಾಲ್ಕು ನಿಮಿಷದ ದೃಶ್ಯಗಳಲ್ಲಿ ತೋರಿಸುವ ಸಂಕೇತ ಭಾಷೆಯಲ್ಲೇ ಪ್ರೇಕ್ಷಕರಿಗೆ ನಡುಕ ಉಂಟಾಗುವಂತಹ ಭಾವನಾತ್ಮಕ ತಿರುವುಗಳು ಮೂಡಿಬರುತ್ತವೆ.
>
> **– ಮುಪ್ಪಿನ ಬಸವಲಿಂಗ ಸ್ವಾಮೀಜಿ.**
> ಅನ್ನದಾನೇಶ್ವರ ಸಂಸ್ಥಾನ ಮಠ.

ಇದು ಕೇವಲ ಶಾಲೆಯ ಒಂದು ಕಾರ್ಯಕ್ರಮ ಅಲ್ಲ. ಬಳ್ಳಾರಿ, ಹಂಪಿ ಉತ್ಸವ, ಬೂದಗುಂಪ, ಇಳಕಲ್ಲ, ಗಜೇಂದ್ರಗಡ ಸಾಹಿತ್ಯ ಸಮ್ಮೇಳನ, ಕೋಡಿಕೊಪ್ಪದ ಹಠಯೋಗಿ ವೀರಪ್ಪಜ್ಜನ ಶತಮಾನೋತ್ಸವದಲ್ಲಿ, ಹಾಲಕೆರೆ ಜಾತ್ರಾ ಮಹೋತ್ಸವ ಸೇರಿದಂತೆ ಹಳ್ಳಿ, ಪಟ್ಟಣಗಳಲ್ಲಿ ಈ ಕಿವುಡ, ಮೂಗ ಮಕ್ಕಳು ವಿವಿಧ ರೀತಿಯ ನಾಟಕದ ಪ್ರದರ್ಶನ ನಡೆಸಿದ ಎಲ್ಲೆಡೆ ಜನರು ಕಣ್ಣು ತುಂಬಿಕೊಂಡು ನೋಡುವಂತಿದೆ. ಕಿವಿಗೊಡದವರು ನಮ್ಮ ಮನಸ್ಸನ್ನು ಮುಟ್ಟಿದ್ದಾರೆ ಎಂದು ಅನೇಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಕಲೆಯನ್ನು ಮೌನಗೊಳಿಸಬಹುದು, ಆದರೆ ಆ ಮೌನದೊಳಗಿರುವ ಬದಲಾವಣೆ–ಚಲನೆಗಳನ್ನು ನಿಲ್ಲಿಸಲು ಸಾಧ್ಯವಿಲ್ಲವೆಂಬುದನ್ನು ಮಕ್ಕಳು ಸಾಬೀತು ಮಾಡಿದ್ದಾರೆ.

ವಿಶ್ವ ಅಂಗವಿಕಲರ ದಿನದ ಪ್ರಯುಕ್ತ ಅನೇಕ ಕಡೆ ಭಾಷಣಗಳು, ಜಾಗೃತಿ ಅಂಕಣಗಳು, ಚರ್ಚೆಗಳು ನಡೆಯುತ್ತವೆ. ಆದರೆ ನರೇಗಲ್ಲದ ಈ ಮಕ್ಕಳ ನಾಟಕವೇ ನಿಜವಾದ ದಿನದ ಅರ್ಥ. ಅಂಗವೈಕಲ್ಯ ಕಣ್ಣು, ಕಿವಿ, ಕಾಲು, ಕೈಗಳಲ್ಲಿ ಇರಬಹುದು; ಆದರೆ ಮನಸ್ಸಿನ ಶಕ್ತಿ ಸಂಪೂರ್ಣವಾಗಿದ್ದರೆ ಜಗತ್ತನ್ನೇ ಬದಲಾಯಿಸಬಹುದು. ಈ ಮಕ್ಕಳು ನಾವು ದೌರ್ಬಲ್ಯಕ್ಕೇ ಜನಿಸಿಲ್ಲ, ಹೋರಾಡಲು ಜನಿಸಿದ್ದೇವೆ ಎಂಬ ಸಂದೇಶವನ್ನು ತಮ್ಮ ಭಿನಯದ ಮೂಲಕ ಸಾರುತ್ತಿದ್ದಾರೆ.

ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯವನ್ನು ಕೇವಲ ಕಾನೂನು ಚೌಕಟ್ಟಿನಲ್ಲಿ ನಿಲ್ಲಿಸಲು ಸಾಧ್ಯವಿಲ್ಲ. ಸಮಾಜದ ಮನಸ್ಸು ಬದಲಾಗಬೇಕು. ಸಂವೇದನೆ, ಗೌರವ, ಜವಾಬ್ದಾರಿ ಇವೆಲ್ಲವೂ ಅಲ್ಲಿನ ಜನರ ಮನಸ್ಸಿನಲ್ಲಿ ಬೆಳೆಯಬೇಕು. ಅದಕ್ಕಾಗಿ ಕಲೆಯಿಗಿಂತ ದೊಡ್ಡ ಅಸ್ತ್ರ ಮತ್ತೊಂದು ಇಲ್ಲ. ಈ ಕಿವುಡ ಮಕ್ಕಳ ಹೋರಾಟ ಕಲೆಯ ಮೂಲಕ ನಡೆಯುತ್ತಿರುವ ಅತ್ಯಂತ ಬಲವಾದ ಸಾಮಾಜಿಕ ಪರಿವರ್ತನೆ.

ಮರದ ಬೇರುಗಳು ಮಣ್ಣಿನೊಳಗೆ ಮೌನವಾಗಿ ಬಲಗೊಳ್ಳುವಂತೆ, ಸಮಾಜ ಬದಲಾವಣೆಯ ಬೀಜವೂ ಮೌನದಲ್ಲೇ ಬಿತ್ತಲಾಗುತ್ತದೆ. ನರೇಗಲ್ಲದ ಈ ಮಕ್ಕಳ ಕಡ್ಲಿಮಟ್ಟಿ ಕಾಶಿಬಾಯಿ ಅದಕ್ಕೆ ಜೀವಂತ ಉದಾಹರಣೆ. ಅಂಗವಿಕಲತೆಯಲ್ಲ, ಅವರ ಸಾಮರ್ಥ್ಯದಲ್ಲೇ ನಮ್ಮ ಸಮಾಜದ ನಾವೂ ಕಲಿಯಬೇಕಾದ ಪಾಠ ಅಡಗಿದೆ. ವಿಶ್ವ ಅಂಗವಿಕರ ದಿನದ ಈ ಸಂದರ್ಭದಲ್ಲಿ ಈ ಮೌನದ ಕಲಾವಿದರ ಶಕ್ತಿ, ಧೈರ್ಯ ಸಾಮಾಜಿಕ ಹೊಣೆಗಾರಿಕೆಯ ಬದ್ಧತೆ–ಗೆ ನಮನ ಮಾಡುವುದೇ ನಾವು ನೀಡಬಹುದಾದ ಅತ್ಯುತ್ತಮ ಗೌರವವಾಗಿದೆ.

**– ಸಿಕಂದರ ಎಂ.ಆರಿ.**
ಪತ್ರಕರ್ತರು, ಲೇಖಕರು, ಅಬ್ಬಿಗೇರಿ.

**ಶಿಗ್ಲಿ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಉನ್ನತೀಕರಿಸಿದ ಸರಕಾರಿ ಪ್ರೌಢಶಾಲೆ ಉದ್ಘಾಟನೆ**

# ಶಿಗ್ಲಿ ಗ್ರಾಮಸ್ಥರು ಶಿಕ್ಷಣ ಪ್ರೇಮಿಗಳು



> ಡಿಡಿಪಿಐ ಆರ್.ಎಸ್. ಬುರಡಿ ಮಾತನಾಡಿ, ಶಿಗ್ಲಿಯ ಗ್ರಾಮಸ್ಥರು ಶಿಕ್ಷಣ ಪ್ರೇಮಿಗಳಾಗಿದ್ದು, ಇಲ್ಲಿ ಎಲ್ಲರೂ ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡುತ್ತಾರೆ. ಶಿಕ್ಷಣವು ಒಂದು ಶಕ್ತಿ. ಅದಕ್ಕಾಗಿ ಮಕ್ಕಳಿಗೆ ಉತ್ತಮ ಶಿಕ್ಷಣ ದೊರಕಿಸಬೇಕಾಗಿರುವದು ಪ್ರತಿಯೊಬ್ಬ ಪಾಲಕರ ಕರ್ತವ್ಯವಾಗಿದೆ. ಇದೀಗ ಉದ್ಘಾಟನೆಗೊಂಡಿರುವ ಸರಕಾರಿ ಪ್ರೌಢಶಾಲೆ ಕರ್ನಾಟಕ ಪಬ್ಲಿಕ್ ಸ್ಕೂಲ್ ಆಗಿ ಮಾರ್ಪಾಡು ಆದಲ್ಲಿ ಇದೊಂದು ದೊಡ್ಡ ಹೆಜ್ಜೆಯಾಗಲಿದೆ. ಮಕ್ಕಳಿಗೆ ಅನೇಕ ಸೌಲಭ್ಯಗಳ ಜೊತೆ ಖಾಸಗಿ ಶಾಲೆಗಳಂತೆ ಉತ್ತಮ ಶಿಕ್ಷಣವೂ ದೊರೆಯುವಂತಾಗುತ್ತದೆ ಎಂದರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರಕಾರಿ ಶಾಲೆಗಳಲ್ಲಿಯೂ ಸಹ ಉತ್ತಮ ಗುಣಮಟ್ಟದ ತಂತ್ರಜ್ಞಾನ ಆಧಾರಿತ ಶಿಕ್ಷಣ ದೊರೆಯುತ್ತಿದ್ದು, ಸರಕಾರಿ ಶಾಲೆಗಳನ್ನು ಉಳಿಸಿ–ಅಭಿವೃದ್ಧಿಪಡಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಸಮೀಪದ ಶಿಗ್ಲಿ ಗ್ರಾಮದಲ್ಲಿ ಗದಗ ಜಿಲ್ಲಾಡಳಿತ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಶಿರಹಟ್ಟಿ, ಸಮೂಹ ಸಂಪನ್ಮೂಲ ಕೇಂದ್ರ ಶಿಗ್ಲಿ ಆಶ್ರಯದಲ್ಲಿ ಮಂಗಳವಾರ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಉನ್ನತೀಕರಿಸಿದ ಸರಕಾರಿ ಪ್ರೌಢಶಾಲೆಯನ್ನು ಉದ್ಘಾಟಿಸಿ ಮಾತನಾಡಿದರು.

ಶಿಗ್ಲಿ ಗ್ರಾಮ ನಮ್ಮ ಕ್ಷೇತ್ರದಲ್ಲಿ ಶಿಕ್ಷಣ ಕಾಶಿ ಎನ್ನುವ ಹೆಸರು ಪಡೆದಿದ್ದು, ಇಲ್ಲಿನ ಅನೇಕ ಮಹನೀಯರು ತಮ್ಮ ಸಾಮರ್ಥ್ಯದಿಂದ ದೇಶದ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿ ಗ್ರಾಮದ ಕೀರ್ತಿಗೆ ಕಾರಣರಾಗಿದ್ದಾರೆ. ಇಲ್ಲಿ ಸರಕಾರಿ ಪ್ರಾಥಮಿಕ ಶಾಲೆಗಳು, ಪ.ಪೂ. ಕಾಲೇಜುಗಳಿದ್ದು, ಉತ್ತಮ ಶಿಕ್ಷಣ ಪ್ರಗತಿಯನ್ನು ನೀಡಿವೆ. ಈ ನಿಟ್ಟಿನಲ್ಲಿ ಇಲ್ಲಿ ಸರಕಾರಿ ಪ್ರೌಢಶಾಲೆಯ ಬೇಡಿಕೆಯು ಬಹುದಿನಗಳಿಂದ ಇದ್ದು, ಇದಕ್ಕಾಗಿ ವಿಶೇಷ ಪ್ರಯತ್ನ ಮಾಡಿ ಮಂಜೂರಿ ದೊರೆತಿದೆ. ಅದಕ್ಕಾಗಿ ಇಲ್ಲಿನ ಅನೇಕರು ಪಕ್ಷಾತೀತವಾಗಿ ಸಹಕಾರ ನೀಡಿದ್ದಾರೆ. ಇದೀಗ ಇಲ್ಲಿ ಪ್ರಾರಂಭವಾಗಿರುವ ಸರಕಾರಿ ಪ್ರೌಢಶಾಲೆಗೆ ಯಾವುದೇ ಅನಾನೂಕೂಲತೆಗಳು ಆಗದಂತೆ ವಿಶೇಷ ಆದ್ಯತೆ ನೀಡುವ ಮೂಲಕ ಉತ್ತಮ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಕ್ರಮವಹಿಸಬೇಕಾಗಿದೆ ಎಂದು ಹೇಳಿದರು.

ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಗ್ರಾ.ಪಂ ಅಧ್ಯಕ್ಷೆ ಸಂಗೀತಾ ಪೂಜಾರ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ನಾಣಕಿ ನಾಯ್ಕ, ಎಸ್‌ಡಿಎಂಸಿ ಅಧ್ಯಕ್ಷ ರಾಮಣ್ಣ ಬೂದಿಹಾಳ, ಆದೇಶ ಹುಲಗೂರ, ದೇವೆಂದ್ರಪ್ಪ ಕೊಪ್ಪದ, ಮಂಜುನಾಥ ಬದಿ, ಬಿ.ಎಸ್. ಹರ್ಲಾಪೂರ, ಸಿಆರ್‌ಪಿ ಜ್ಯೋತಿ ಗಾಯಕವಾಡ, ಮುಖ್ಯೋಪಾಧ್ಯಾಯೆ ಎನ್.ವಿ. ಕುಲಕರ್ಣಿ, ಡಿ.ವೈ. ಹುನಗುಂದ, ಅಶೋಕ ಶಿರಹಟ್ಟಿ, ರಾಮಣ್ಣ ಲಮಾಣಿ, ಕೃಷ್ಣ ಬಿದರಳ್ಳಿ, ಸಂತೋಷ ತಾಂದಳೆ ಹಾಗೂ ಗ್ರಾ.ಪಂ ಸದಸ್ಯರು ಹಾಜರಿದ್ದರು. ಎಸ್.ಬಿ. ಅಣ್ಣಿಗೇರಿ ಸ್ವಾಗತಿಸಿದರು, ತಿಪ್ಪಾ ನಾಯ್ಕ್ ನಿರೂಪಿಸಿದರು.



ನರೇಗಲ್ಲ ಪಟ್ಟಣ ಪಂಚಾಯಿತಿ ಆವರಣದ ಮಾರುತಿ ದೇವಸ್ಥಾನದಲ್ಲಿ ಶನಿವಾರ ಸಂಜೆ ಶ್ರದ್ಧಾ ಭಕ್ತಿಯಿಂದ ಕಾರ್ತಿಕೋತ್ಸವವನ್ನು ಆಚರಿಸಲಾಯಿತು. ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಎಂ.ಎಚ್. ಸಿತೀಮನಿ, ರಮೇಶ ಹಲಗಿಯವರ, ಎಸ್.ಎ. ಮೆಣಸಗಿ, ಶಂಕ್ರಪ್ಪ ದೊಡ್ಡಣ್ಣವರ, ರಕ್ಷಿತ ಮುತಗಾರ, ನೀಲಪ್ಪ ಚಳ್ಳಮರದ, ಆರೀಫ ಮಿರ್ಜಾ, ನಿರ್ಮಲಾ ಕಡೆತೋಟದ, ನಿಂಗಪ್ಪ ಮಡಿವಾಳರ, ಉದಯ ಗುಡಿಮನಿ, ಗುರುಲಿಂಗಯ್ಯ ಎಸ್, ಶೇಖಪ್ಪ ಹೊನವಾಡ, ಮಹಾದೇವ ಮ್ಯಾಗೇರಿ ಸೇರಿದಂತೆ ಇತರರಿದ್ದರು.



ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಗದಗ ವತಿಯಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆಯಲ್ಲಿ ಆಯ್ಕೆಯಾಗಿ ಅಧ್ಯಕ್ಷರಾದ ರಾಜು ಹೆಬ್ಬಳ್ಳಿ, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರು, ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ಆನಂದಯ್ಯ ವಿರಕ್ತಮಠ, ಮಹಾಲಿಂಗಯ್ಯ ಹಿರೇಮಠ ಅವರನ್ನು ಆತ್ಮೀಯವಾಗಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೆ.ಎ. ಬಳಿಗೇರ, ಬೂದಪ್ಪ ಅಂಗಡಿ, ಎಂ.ಕೆ. ಲಮಾಣಿ, ಪ್ರಕಾಶ ಅಸುಂಡಿ, ಬಸಣ್ಣ ಕೋಟಗಿ, ಸಿದ್ಧಲಿಂಗೇಶ ಸಜ್ಜನಶೆಟ್ಟರ, ಬಿ.ಕೆ. ನಿಂಬನಗೌಡರ, ಅಶೋಕ ಹಾದಿ, ಸುಲೋಚನಾ ಐಹೊಳಿ, ನರಗುಂದ ಸಾಲಿಯವರು, ಗಿರಿಜಾ ಹಸಬಿ, ಲಕ್ಷ್ಮೇಶ್ವರದ ಅರಳಿಹಳ್ಳಿ ಮುಂತಾದವರು ಭಾಗವಹಿಸಿದ್ದರು.

# ಹೈದರಾಬಾದ್| ರದ್ದಾದ ನೋಟುಗಳ ದುರುಪಯೋಗ; ಅಂಚೆ ಸಿಬ್ಬಂದಿಗೆ 2 ವರ್ಷ ಜೈಲು ಶಿಕ್ಷೆ

**■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್**

ನೋಟು ರದ್ದತಿಯ ಸಂದರ್ಭದಲ್ಲಿ 27.27 ಲಕ್ಷ ರೂ.ಗಳನ್ನು ದುರುಪಯೋಗಪಡಿಸಿಕೊಂಡ ಆರೋಪದ ಮೇಲೆ ವಿಶೇಷ ಸಿಬಿಐ ನ್ಯಾಯಾಲಯವು ಅಂಚೆ ಇಲಾಖೆಯ ಇಬ್ಬರು ಅಧಿಕಾರಿಗಳಿಗೆ ತಲಾ 65,000 ರೂ.ಗಳ ದಂಡದೊಂದಿಗೆ ಎರಡು ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಿದೆ ಎಂದು ಅಧಿಕಾರಿಯೊಬ್ಬರು ಮಂಗಳವಾರ ತಿಳಿಸಿದ್ದಾರೆ. ಹೈದರಾಬಾದ್‌ನ ವಿಶೇಷ ಸಿಬಿಐ ನ್ಯಾಯಾಲಯವು ಸೋಮವಾರ ತೆಲಂಗಾಣದ ಹೈದರಾಬಾದ್‌ನ ಹುಮಾಯೂನ್ ನಗರ ಉಪ–ಅಂಚೆ ಕಚೇರಿಯ ಆಗಿನ ಅಂಚೆ ಸಹಾಯಕ (ಖಜಾಂಚಿ) ಅಡಪ ಶ್ರೀನಿವಾಸ್ ಮತ್ತು ಆಗಿನ ಅಂಚೆ ಸಹಾಯಕಿ ಯು. ರಾಜ್ಯಲಕ್ಷ್ಮಿ ಅವರನ್ನು ಅಪರಾಧಿ ಎಂದು ಘೋಷಿಸಿ ಶಿಕ್ಷೆ ವಿಧಿಸಿದೆ. ವಿಶ್ವಾಸದ್ರೋಹ ಮತ್ತು ವಂಚನೆ ಆರೋಪದ ಮೇಲೆ ಇಬ್ಬರನ್ನು ತಪ್ಪಿತಸ್ಥರೆಂದು ಘೋಷಿಸಲಾಯಿತು ಮತ್ತು ತಲಾ 65,000 ರೂ.ಗಳ ದಂಡದೊಂದಿಗೆ ಎರಡು ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಲಾಯಿತು.

# ಮನೋರಂಜಿತಾ ಹೇಮಾದ್ರಿ ನಿಧನ; ನೇತ್ರದಾನ




**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ವಿವೇಕಾನಂದ ರಸ್ತೆಯ ಮಸಾರಿ ಭಾಗದ ನಿವಾಸಿಗಳೂ, ಆರ್ಯವೈಶ್ಯ ಸಮಾಜದ ಹಿರಿಯರೂ ಆದ ಮನೋರಂಜಿತಾ ಗೋಪಾಲಕೃಷ್ಣ ಹೇಮಾದ್ರಿ (82) ಅವರು ರವಿವಾರ ಬೆಳಿಗ್ಗೆ ನಿಧನರಾದರು.

ಪತಿ, ಮಕ್ಕಳನ್ನು ಹಾಗೂ ಬಂಧು ಬಳಗವನ್ನು ಬಿಟ್ಟು ಅಗಲಿರುವ ಮೃತರ ಅಂತ್ಯಕ್ರಿಯೆಯು ಸಂಜೆ ಜರುಗಿತು. ಗದಗ–ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ ಮೃತರ ನೇತ್ರದಾನ ನೀಡುವಂತೆ ಪ್ರೇರಣೆ ನೀಡಿದರು. ಕುಟುಂಬದವರ ಒಪ್ಪಿಗೆಯಂತೆ ಹುಬ್ಬಳ್ಳಿಯ ಕಣ್ಣಿನ ಆಸ್ಪತ್ರೆಯ ತಜ್ಞರ ತಂಡ ನೇತ್ರದಾನದ ಪ್ರಕ್ರಿಯೆ ಕೈಗೊಂಡಿತು.

ಈ ಸಂದರ್ಭದಲ್ಲಿ ಕುಟುಂಬದ ಮುಖ್ಯಸ್ಥರು, ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ಝೋನ್ ಚೇರ್‌ಪರ್ಸನ್ ರಮೇಶ ಶಿಗ್ಲಿ ಮುಂತಾದವರಿದ್ದರು.

**ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಗದಗ ಜಿಲ್ಲಾ ಘಟಕದ ವತಿಯಿಂದ ಯುವ ಸಮಾವೇಶ**

# ಮೌಲ್ಯಾಧಾರಿತ ನಾಯಕತ್ವದಿಂದ ಸಮಾಜದಲ್ಲಿ ಬದಲಾವಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಗದಗ ಜಿಲ್ಲಾ ಘಟಕದ ವತಿಯಿಂದ 'ಸಬಲ ಯುವಕರು–ಶುದ್ಧ ಮನಸ್ಸು, ಸುರಕ್ಷಿತ ಭವಿಷ್ಯ' ಎಂಬ ವಿಷಯಾಧಾರಿತ ಯುವ ಸಮಾವೇಶವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಡಿ.ವೈ. ಎಸ್.ಪಿ ಮಹಾಂತೇಶ ಸಜ್ಜನ್ ಸೈಬರ್ ವಂಚನೆಯ ವಿವಿಧ ವಿಧಾನಗಳನ್ನು ವಿವರಿಸಿ, ಅದರಿಂದ ತಪ್ಪಿಸಿಕೊಳ್ಳುವ ಕುರಿತು ಮಹತ್ವದ ಮಾಹಿತಿ ನೀಡಿದರು. ನಂತರ ಡಾ. ಮುಹಮ್ಮದ್ ನಿಜಾಮುದ್ದೀನ್ ಅತ್ತಾರ ಯುವಕರಲ್ಲಿ ವ್ಯಸನಗಳಿಂದ ಉಂಟಾಗುವ ದೈಹಿಕ ಹಾಗೂ ಮಾನಸಿಕ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಿದರು.




ಮುಖ್ಯ ಅತಿಥಿಗಳಾದ ಮುಹಮ್ಮದ್ ಕುಂಞ ಮಾತನಾಡಿ, ನಾವು ಒಂದೇ ತಂದೆ–ತಾಯಿಯ ಮಕ್ಕಳು, ಪರಸ್ಪರ ಸಹೋದರರು. ದ್ವೇಷ–ಹಗೆತನವನ್ನು ಬಿಟ್ಟು ದೇಶ ನಿರ್ಮಾಣ ಮತ್ತು ಸಮಾಜ ಸುಧಾರಣೆಯ ಕಾರ್ಯದಲ್ಲಿ ಯುವಕರು ತಮ್ಮ ಯೌವ್ವನವನ್ನು ತೊಡಗಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಸೋಲಿಡಾರಿಟಿ ಯೂತ್ ಮೂವ್ಮೆಂಟ್ ಕರ್ನಾಟಕದ ವತಿಯಿಂದ ರಚಿಸಲಾಗಿರುವ 'ಡಿಜಿಟಲ್ ಸ್ವಾತಂತ್ರ್ಯ' ಎಂಬ ಪುಸ್ತಕವನ್ನು ಬಿಡುಗಡೆಗೊಳಿಸಲಾಯಿತು.

> ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಯುವ ಮುಖಂಡ ಕೃಷ್ಣಗೌಡ ಎಚ್. ಪಾಟೀಲ ಯುವಕರಲ್ಲಿ ಉತ್ತಮ ನಾಯಕತ್ವ ವಿಕಸನವಾಗಲು ವ್ಯಕ್ತಿತ್ವ ಮತ್ತು ಜೀವನ ಶೈಲಿಯಲ್ಲಿ ಮೌಲ್ಯಾಧಾರಿತ ಬದಲಾವಣೆಯ ಅಗತ್ಯತೆಯನ್ನು ಒತ್ತಿಹೇಳಿ, ಮೌಲ್ಯಾಧಾರಿತ ನಾಯಕತ್ವವೇ ಸಮಾಜದಲ್ಲಿ ನಿಜವಾದ ಬದಲಾವಣೆಗೆ ಕಾರಣವಾಗುತ್ತದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರಿಗೂ ಮುನ್ನಾ ಕಲ್ಮನಿಸಂವಿಧಾನ ಪೀಠಿಕೆಯ ಪ್ರತಿಜ್ಞೆಯನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ಸೋಲಿಡಾರಿಟಿ ಯೂತ್ ಮೂವ್ಮೆಂಟ್ ರಾಜ್ಯಾಧ್ಯಕ್ಷ ಡಾ. ನಸೀಮ್ ಅಹ್ಮದ್, ಜಮಾಅತೆ ಉಲೆಮಾ–ಎ–ಹಿಂದ್ ಅಧ್ಯಕ್ಷ ಮೌಲಾನಾ ಇನಾಯತುಲ್ಲಾ ಪೀರಜಾದೆ, ಮುಹಮ್ಮದ್ ಇಸ್ಮಾಯಿಲ್, ಇಲಿಯಾಸ್ ನಾಲ್ಬಂದ್, ಮುಹಮ್ಮದ್ ಯೂಸುಫ್ ಮುಲ್ಲಾ ಉಪಸ್ಥಿತರಿದ್ದರು.

ಜುನೇದ ಉಮಚಗಿ, ಕೆ.ಆಯ್. ಶೇಖ್, ರಝಾಕ್ ಡಂಕೇದ, ಇಮಾಮ್‌ಸಾಬ್ ಮೊರಬದ, ಉಸ್ಮಾನ್ ಮಾಳೆಕೊಪ್ಪ, ರಿಯಾಜ್ ಶೇಖ್, ಅಬ್ದುಲ್ ಹಫೀಜ್ ಉಮಚಗಿ, ಮುಹಮ್ಮದ ಇಸ್ಮಾಯಿಲ್, ಅಕ್ಬರ್‌ಅಲಿ ಅತ್ತಾರ, ಜಾವೀದ್ ಉಮಚಗಿ, ಮೆಹಬೂಬಅಲಿ, ಫಯಿಮ್, ಅಲ್ತಾಫ್, ಸಮೀರ್, ಫುರ್ಕಾನ್, ಆದಿಲ್, ಕಾಸಿಮ್ ದರಗದ ಮುನ್ನಾ ಶೇಖ ಮುಂತಾದವರು ಪಾಲ್ಗೊಂಡಿದ್ದರು.

# ಗೀತಾ ಜಯಂತಿ ಡಿ. 6ಕ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಂಸ್ಕೃತ ಭಾರತೀ ವತಿಯಿಂದ ಗೀತಾ ಜಯಂತಿ ಆಚರಣೆ ಮತ್ತು ಸಮರ್ಪಣಾ ದಿನವನ್ನು ಡಿ. 6ರಂದು ಸಾಯಂಕಾಲ 5.30 ಗಂಟೆಗೆ ಆಚರಿಸಲಾಗುತ್ತಿದೆ.

ಭಗವದ್ಗೀತೆಯ 12 ಮತ್ತು 15ನೇ ಅಧ್ಯಾಯದ ಸಾಮೂಹಿಕ ಪಠಣ ಕಾರ್ಯಕ್ರಮವಿದೆ. ಈ ಕಾರ್ಯಕ್ರಮವನ್ನು ಗದುಗಿನ ಪಂಚಾಕ್ಷರಿ ನಗರದ 3/ಎ ಕ್ರಾಸಿನ ಬನ್ನಿ ಮಹಾಂಕಾಳಿ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ. ಆಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಗದಗ ನಗರದ ಸಂಸ್ಕೃತ ಭಾರತೀ ಜಿಲ್ಲಾ ಸಂಯೋಜಕರಾದ ಎಸ್.ಎನ್. ಶಿಂಪಿಗೇರಿ ಹಾಗೂ ಮೌನೇಶ ಭಜಂತ್ರಿ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ. ಹೆಚ್ಚಿನ ಮಾಹಿತಿಗೆ–9845792371 ಮತ್ತು 8951348235 ಸಂಪರ್ಕಿಸಬಹುದಾಗಿದೆ.

**ರಸ್ತೆ ಅಭಿವೃದ್ಧಿಪಡಿಸುವಂತೆ ಆಗ್ರಹಿಸಿ ಕ.ರ.ವೇ ಕಾರ್ಯಕರ್ತರಿಂದ ಪ್ರತಿಭಟನೆ, ರಸ್ತೆ ತಡೆ**

# ಧೂಳಿನ ಸಮಸ್ಯೆಯಿಂದ ಮುಕ್ತಿ ನೀಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೋಮೇಶ್ವರ ಪಾದಗಟ್ಟಿಯಿಂದ ಹಳೇ ಬಸ್ ನಿಲ್ದಾಣದವರೆಗಿನ ರಸ್ತೆ ಅಭಿವೃದ್ಧಿಪಡಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಶ ಶೆಟ್ಟಿ) ಬಣದ ಕಾರ್ಯಕರ್ತರು ಮಂಗಳವಾರ ರಸ್ತೆ ಸಂಚಾರ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ಈ ರಸ್ತೆಯನ್ನು ಕಳೆದ 8/10 ವರ್ಷಗಳ ಹಿಂದೆ ಪುರಸಭೆ ಅಭಿವೃದ್ಧಿ ಮಾಡುವ ಕಾರಣದಿಂದ ಒತ್ತುವರಿ ತೆರವುಗೊಳಿಸಿತ್ತು. ಆದರೆ ಇದುವರೆಗೂ ರಸ್ತೆ ಅಭಿವೃದ್ಧಿಯ ಬಗ್ಗೆ ಪುರಸಭೆ ಸೇರಿ ಯಾರೊಬ್ಬ ಜನಪ್ರತಿನಿಧಿಗಳೂ ಕಿಂಚಿತ್ತೂ ಚಿಂತನೆ ಮಾಡಿಲ್ಲ. ಈ ಭಾಗದ ಜನರು ಪ್ರತಿದಿನ ಧೂಳಿನ ಸಮಸ್ಯೆಯಿಂದಾಗಿ ರೋಗ–ರುಜಿನಗಳಿಗೆ ತುತ್ತಾಗಿ ರೋಸಿಹೋಗಿದ್ದಾರೆ. ರಸ್ತೆ ನಿರ್ಮಿಸಬೇಕು ಎಂದು ಅನೇಕ ಬಾರಿ ನಿವಾಸಿಗಳು ಪುರಸಭೆಗೆ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನ ಆಗಿರಲಿಲ್ಲ. ಇದರಿಂದಾಗಿ ಆಕ್ರೋಶಗೊಂಡ ನಿವಾಸಿಗಳು ರಸ್ತೆ ಸಂಚಾರ ಬಂದ್ ಮಾಡಿ ಪ್ರತಿಭಟನೆಗೆ ಮುಂದಾಗಿದ್ದರು.



ಪ್ರತಿಭಟನಾಕಾರರು ಹಳೇ ಬಸ್ ನಿಲ್ದಾಣ, ಬಸ್ತಿಬಣ, ಚನ್ನಮ್ಮನ ವನ, ಪರ್ವತ ಮಲ್ಲಯ್ಯನ ದೇವಸ್ಥಾನ, ವಿದ್ಯಾರಣ್ಯ ವರ್ತುಲಕ್ಕೆ ತೆರಳುವ ಮಾರ್ಗ ಹಾಗೂ ಪುರಸಭೆಯಿಂದ ಬಜಾರಕ್ಕೆ ಬರುವ ರಸ್ತೆಗಳನ್ನು ಸಂಪೂರ್ಣ ಬಂದ್ ಮಾಡಿದ್ದರು. ಎಲ್ಲ ಕಡೆ ರಸ್ತೆ ಸಂಚಾರ ಬಂದ್ ಆಗಿದ್ದರಿಂದ ಸಾರ್ವಜನಿಕರು ಪರದಾಡುವಂತಾಗಿತ್ತು.

> ವಿಷಯ ತಿಳಿದು ಶಾಸಕ ಡಾ. ಚಂದ್ರು ಲಮಾಣಿ ಸ್ಥಳಕ್ಕೆ ಆಗಮಿಸಿ, ಕರವೇ ಕಾರ್ಯಕರ್ತರು ಮತ್ತು ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಇಂಜಿನಿಯರ್ ವೀರೇಂದ್ರಸಿಂಗ್ ಕಾಟೆವಾಲೆ ಅವರೊಂದಿಗೆ ಚರ್ಚಿಸಿದರು. ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ರಸ್ತೆ ನಿರ್ಮಾಣಕ್ಕೆ ಆಗ್ರಹಿಸಿದರು.

ಪುರಸಭೆ ಸಾಮಾನ್ಯ ನಿಧಿಯಡಿ ರಸ್ತೆ ನಿರ್ಮಿಸಲು ಎಲ್ಲ ವ್ಯವಸ್ಥೆ ಮಾಡಿದ್ದೇವೆ. ಸದ್ಯ ಲಭ್ಯ ಇರುವ ಅನುದಾನದಲ್ಲಿ ಪಾದಗಟ್ಟಿಯಿಂದ ಪರ್ವತಮಲ್ಲಯ್ಯನ ದೇವಸ್ಥಾನದವರೆಗೆ ಸಿಸಿ ರಸ್ತೆ ನಿರ್ಮಿಸಿ ನಂತರ ಮುಂದಿನ ದಿನಗಳಲ್ಲಿ ಉಳಿದ ರಸ್ತೆ ನಿರ್ಮಿಸಲಾಗುವುದು ಎಂದು ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ತಿಳಿಸಿದರು. ಇದಕ್ಕೆ ಪ್ರತಿಭಟನಾಕಾರರು ಒಪ್ಪದೇ ಪೂರ್ಣ ರಸ್ತೆ ನಿರ್ಮಿಸಬೇಕು ಎಂದು ಪಟ್ಟು ಹಿಡಿದರು. ಆಗ ಶಾಸಕ ಡಾ. ಚಂದ್ರು ಲಮಾಣಿ ಅವರನ್ನು ಸಮಾಧಾನಪಡಿಸಿ, ಈಗ ಇರುವ ಅನುದಾನದಲ್ಲಿ ರಸ್ತೆ ನಿರ್ಮಿಸಲಿ. ಈ ಕಾಮಗಾರಿ ಮುಗಿಯುವುದರೊಳಗಾಗಿ ಉಳಿದ ರಸ್ತೆಯನ್ನೂ ನಿರ್ಮಿಸಲು ಅನುದಾನ ಹೊಂದಿಸೋಣ ಎಂದು ತಿಳಿಸಿದರು. ಶಾಸಕರ ಭರವಸೆಯಿಂದ ಕಾರ್ಯಕರ್ತರು ಪ್ರತಿಭಟನೆ ನಿಲ್ಲಿಸಿದರು.


ಈ ವೇಳೆ ವೇದಿಕೆಯ ತಾಲೂಕು ಘಟಕದ ಅಧ್ಯಕ್ಷ ಮಹೇಶ ಕಲಘಟಗಿ, ಶಕ್ತಿ ಕತ್ತಿ, ಮಂಜಣ್ಣ ಗಾಂಜಿ, ಅಂಬರೀಶ್ ಗಾಂಜಿ, ಶಿವಾನಂದ ಮೆಕ್ಕಿ, ನಾಗರಾಜ ಬಟಗುರ್ಕಿ, ಬಸವರಾಜ ಕುಂಬಿ, ಆನಂದ ತಟ್ಟಿ, ಆಕಾಶ ಸೌದತ್ತಿ, ಮಲ್ಲನಗೌಡ ಪಾಟೀಲ, ಹಡಗಲಿಮಠ, ಮಂಜುನಾಥ ಗಾಂಜಿ, ಕೊಟ್ರೇಶ ಕತ್ತಿ, ಈಶ್ವರಗೌಡ ಪಾಣಿಗಟ್ಟಿ, ಪ್ರವೀಣ್ ದಶಮನಿ, ಶ್ರೇಯಾಂಕ ಹಿರೇಮಠ, ಭರಮಣ್ಣ ಗೌಳಿ, ಪವನ್ ಹಗ್ರದ, ಹನುಮಂತ ಕುಂಬಾರ, ಅಭಿಷೇಕ್ ಗೋಂಗಡಿ ಇದ್ದರು.

# ಬಳಗಾನೂರಿನಲ್ಲಿ ದೀಪೋತ್ಸವ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರು ಗ್ರಾಮದಲ್ಲಿ ಘನಮೌನಿ, ತ್ರಿಕಾಲಜ್ಞಾನಿ, ಮೌನತಪಸ್ವಿ ಚಿಕೇನಕೊಪ್ಪದ ಶ್ರೀಚನ್ನವೀರ ಶರಣರ ಶ್ರೀಮಠದಲ್ಲಿರುವ ಕರ್ತೃ ಗದ್ದುಗೆಗೆ ಕಾರ್ತಿಕ ಮಾಸದ ಅಂಗವಾಗಿ ಡಿಸೆಂಬರ್ 4ರಂದು ಸಂಜೆ 6.30 ಗಂಟೆಗೆ ಪೂಜ್ಯರ ಅಮೃತ ಹಸ್ತದಿಂದ ದೀಪೋತ್ಸವ, 547ನೇ ಮಾಸಿಕ ಶಿವಾನುಭವಗೋಷ್ಠಿ ಮತ್ತು ಸಂಗೀತ ಸುಧೆ ಕಾರ್ಯಕ್ರಮ ಜರಗಲಿದೆ.

ಕಾರ್ಯಕ್ರಮದಲ್ಲಿ ಹೊಸಳ್ಳಿಯ ಬೂದೀಶ್ವರ ಶ್ರೀಮಠದ ಪೂಜ್ಯಶ್ರೀ ಜ. ಅಭಿನವ ಬೂದೀಶ್ವರ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸುವರು. ಬಳಗಾನೂರು ಶ್ರೀಮಠದ ಪೂಜ್ಯಶ್ರೀ ಶಿವಶಾಂತವೀರ ಶರಣರು ಅಧ್ಯಕ್ಷತೆ ವಹಿಸುವರು.



ಶಿವಾನುಭವದಲ್ಲಿ ಶಿವಲಿಂಗ ಶಾಸ್ತ್ರಿಗಳು ಸಿದ್ದಾಪೂರ ಇವರಿಂದ ಪ್ರವಚನ ಜರುಗುವದು. ಎಚ್.ಎಸ್. ವೆಂಕಟಾಪೂರ ಗ್ರಾಮದ ಕುಮಾರಸ್ವಾಮಿ ಹಿರೇಮಠ ಅವರಿಂದ ಸಂಗೀತ ಸುಧೆ ಕಾರ್ಯಕ್ರಮ ಜರುಗಲಿದ್ದು, ಇವರಿಗೆ ಕಲಬುರಗಿಯ ಶಶಿಕುಮಾರ ಅವರು ತಬಲಾ ಸಾಥ್ ನೀಡುವರು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಅನಿರ್ದಿಷ್ಟಾವಧಿ ಧರಣಿಗೆ ಬೆಂಬಲ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರಕಾರ ರಾಜ್ಯದಲ್ಲಿರುವ ಎಲ್ಲಾ ನಗರ, ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಹಲವಾರು ಬೇಡಿಕೆಗಳನ್ನು ಅನೇಕ ವರ್ಷಗಳಿಂದ ಈಡೇರಿಸದ ಕಾರಣ ಡಿ. 5ರಿಂದ ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸಂಘ ಚಿತ್ರದುರ್ಗ ವತಿಯಿಂದ ಹಮ್ಮಿಕೊಂಡಿರುವ ಅನಿರ್ದಿಷ್ಟಾವಧಿ ಧರಣಿಯ ಹಿನ್ನೆಲೆಯಲ್ಲಿ ಕೆಲಸ ಸ್ಥಗಿತಗೊಳಿಸಿ ಲಕ್ಷ್ಮೇಶ್ವರದ ಪೌರ ಕಾರ್ಮಿಕರು ಸಂಪೂರ್ಣ ಬೆಂಬಲ ವ್ಯಕ್ತಪಡಿಸಲಿದ್ದಾರೆ ಎಂದು ಕಾರ್ಮಿಕ ಮುಖಂಡ ಬಸವಣ್ಣೆಪ್ಪ ನಂದೆಣ್ಣವರ ಹೇಳಿದರು.

ಅವರು ಸೋಮವಾರ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ತಹಸೀಲ್ದಾರ ಧನಂಜಯ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದರು.

ಪೌರ ಕಾರ್ಮಿಕರ ದಶಕಗಳ ಅನೇಕ ಬೇಡಿಕೆಗಳ ಈಡೇರಿಕೆಗಾಗಿ ಹೋರಾಟ ಅನಿವಾರ್ಯವಾಗಿದೆ. ರಾಜ್ಯ ಸಂಘದ ತೀರ್ಮಾನಕ್ಕೆ ಎಲ್ಲ ಪೌರ ಕಾರ್ಮಿಕರು ಬದ್ಧರಾಗಿ ನಡೆದುಕೊಳ್ಳುತ್ತೇವೆ ಎಂದು ಹೇಳಿದರು.

ಈ ವೇಳೆ ಪೌರ ಕಾರ್ಮಿಕರಾದ ಹನಮಂತಪ್ಪ ನಂದೆಣ್ಣವರ, ದೇವಪ್ಪ ನಂದೆಣ್ಣವರ, ಅಶೋಕ ನಡುಗೇರಿ, ವಿಶ್ವನಾಥ ಹಾದಿಮನಿ, ರಾಜು ನಂದೆಣ್ಣವರ, ಹನುಮಂತಪ್ಪ ಅಡಗಿಮನಿ, ಮಂಜುನಾಥ ಗಡದವರ, ಅನಿಲ ನಂದೆಣ್ಣವರ, ಆಂಜನೇಯು ರಾಥೋಡ, ಕುಮಾರ ಹಾದಿಮನಿ, ಪ್ರಕಾಶ ಹಿತ್ತಲಮನಿ, ಕುಮಾರ ನಂದೆಣ್ಣವರ ಮುಂತಾದವರು ಇದ್ದರು.

**ಅಗಡಿ ಇಂಜನಿಯರಿಂಗ್ ಕಾಲೇಜಿನ ಕ್ಯಾಂಪಸ್‌ನಲ್ಲಿ ಕನ್ನಡ ಹಬ್ಬ**

# ಕನ್ನಡಿಗರ ಸ್ವಾಭಿಮಾನ ಕಡಿಮೆಯಾಗಬಾರದು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದಿನವೂ ಪ್ರಾಯೋಗಿಕ ತರಗತಿ, ಮೊಬೈಲ್, ಕಂಪ್ಯೂಟರ್, ಕ್ಲಾಸ್‌ರೂಂನಲ್ಲಿ ಇಂಗ್ಲೀಷ್ ಭಾಷೆಯೊಂದಿಗೆ ಸಂವಹನ–ಶಿಕ್ಷಣದಲ್ಲಿರುವ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಬಿಳಿ ಶರ್ಟ್, ಧೋತಿ, ಜುಬ್ಬಾ–ಪೈಜಾಮ್ ಮತ್ತು ಕೊರಳಲ್ಲಿ ಹಳದಿ–ಕೆಂಪು ಬಣ್ಣದ ಕನ್ನಡದ ಶಾಲು, ವಿದ್ಯಾರ್ಥಿನಿಯರು ಗ್ರಾಮೀಣ ಶೈಲಿಯ ಇಳಕಲ್, ಶಿಗ್ಲಿ ಸೀರೆ–ಕುಪ್ಪಸ ತೊಟ್ಟು ಕನ್ನಡದ ಜಾನಪದ ಹಾಡುಗಳಿಗೆ ಕುಣಿದು ಕುಪ್ಪಳಿಸಿ ಅಗಡಿ ಇಂಜಿನಿಯರಿಂಗ್ ಕಾಲೇಜಿನ ಕ್ಯಾಂಪಸ್‌ನಲ್ಲಿ ಸಂಭ್ರಮದಿಂದ ಕನ್ನಡದ ಹಬ್ಬ ಆಚರಿಸಿದರು.

ಕರ್ನಾಟಕ ರಾಜ್ಯೋತ್ಸವ ಹಾಗೂ ಅಗಡಿ ಕನ್ನಡ ಸಂಘದ 11ರ ಸಂಭ್ರಮದ ಅಂಗವಾಗಿ ಪಿಯುಸಿ ಮತ್ತು ಇಂಜಿನಿಯರಿಂಗ್ ಕಾಲೇಜಿನ ಎಲ್ಲ ವಿಭಾಗದಿಂದ ಕೈಗೊಂಡ 'ಅಗಡಿ ಕನ್ನಡ ಹಬ್ಬ' ವಿದ್ಯಾರ್ಥಿಗಳಲ್ಲಿ ಸಂಭ್ರಮವನ್ನುಂಟುಮಾಡಿತು. ಕಾಲೇಜಿನೆಲ್ಲೆಡೆ ಕನ್ನಡದ ಬಾವುಟಗಳು ರಾರಾಜಿಸಿ ಕನ್ನಡ ಕಂಪು ಮೇಳೈಸಿತ್ತು. ಕನ್ನಡ ಹಬ್ಬದ ನಿಮಿತ್ತ ಒಂದು ವಾರ ಮೊದಲೇ ವಿವಿಧ ವಿಭಾಗಗಳ ವಿದ್ಯಾರ್ಥಿಗಳಿಂದ ಕನ್ನಡದ ಕುರಿತ ಪ್ರಬಂಧ, ಚರ್ಚಾ ಸ್ಪರ್ಧೆ, ನೃತ್ಯ, ಹಾಡು, ಸಂಗೀತ, ಚಿತ್ರಕಲಾ ಸ್ಪರ್ಧೆ ಏರ್ಪಡಿಸಲಾಗಿತ್ತು. ವಿದ್ಯಾರ್ಥಿನಿಯರು ಪೂರ್ಣಕುಂಭ, ವಿವಿಧ ವೇಷಭೂಷಣ ಧರಿಸಿ ಭುವನೇಶ್ವರಿ ತಾಯಿಯ ಭಾವಚಿತ್ರ ಮೆರವಣಿಗೆ ಮಾಡಿದರು.

> ಜಾನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಮಾತನಾಡಿ, ಇಂದಿನ ಮಾಹಿತಿ–ತಂತ್ರಜ್ಞಾನ ಯುಗದಲ್ಲಿ ಇಂಗ್ಲಿಷ್ ಸೇರಿ ಇತರೇ ಭಾಷೆಗಳ ಜ್ಞಾನ ಅಗತ್ಯ. ಆದರೆ ಕನ್ನಡ ತಾಯಿಯ ಮಕ್ಕಳಾದ ನಾವೆಲ್ಲ ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಯಾಗಿ ಕನ್ನಡದಲ್ಲೇ ಮಾತನಾಡುತ್ತೇನೆ, ಬರೆಯುತ್ತೇನೆ, ನಿತ್ಯ ವ್ಯವಹಾರದಲ್ಲಿ ಕನ್ನಡವನ್ನೇ ಬಳಸುತ್ತೇನೆ, ಕನ್ನಡೇತರರಿಗೆ ಕನ್ನಡ ಕಲಿಸುತ್ತೇನೆ, ಕನ್ನಡ ನುಡಿ, ಸಂಸ್ಕೃತಿ, ಪರಂಪರೆ ಉಳಿಸಲು ಸದಾ ಕಟಿಬದ್ಧರಾಗೋಣ ಮತ್ತು ಕನ್ನಡದ ಅಂತಃಸತ್ವವನ್ನು ಹೆಚ್ಚಿಸುವ ಸಂಕಲ್ಪ ಮಾಡೋಣ ಎಂದರು.

ಕನ್ನಡ ಹಬ್ಬದ ಸಮಾರೋಪ ಕಾರ್ಯಕ್ರಮದಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸಮಾರಂಭದ ಅಧ್ಯಕ್ಷತೆ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಮಾತನಾಡಿ, ಇಂಜಿನಿಯರಿಂಗ್ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಎಷ್ಟೇ ಉನ್ನತ ಹುದ್ದೆ, ಐಟಿಬಿಟಿಯಲ್ಲಿ ಉದ್ಯೋಗ ಹೊಂದಿದರೂ ಕನ್ನಡ ಭಾಷೆ, ನೆಲ, ಜಲದ ಬಗ್ಗೆ ಪ್ರೀತಿ, ಅಭಿಮಾನ, ಸ್ವಾಭಿಮಾನ ಕಡಿಮೆಯಾಗಬಾರದು ಎಂದರು.

ಅಗಡಿ ಸನ್‌ರೈಸ್ ಆಸ್ಪತ್ರೆಯ ಡಾ. ರಾಜಶೇಖರ ಮೂಲಿಮನಿ, ಡಾ. ಆರ್.ಎಂ. ಪಾಟೀಲ, ಪ್ರೊ. ವಿಕ್ರಮ ಶಿರೋಳ, ಡಾ. ಗಿರೀಶ ಯತ್ನಳ್ಳಿ, ಡಾ. ಸುಜಾತಾ ಸಂಗೂರ, ಪಿಯು ಕಾಲೇಜು ಪ್ರಾಚಾರ್ಯರಾದ ಶುಭಾ ಡಿ, ಕನ್ನಡ ಹಬ್ಬದ ಸಂಯೋಜಕರಾದ ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಪ್ರತಿಮಾ ಮಹಾಪುರುಷ, ಪ್ರೊ. ರಾಜೇಶ್ವರಿ ಗಾಮನಗಟ್ಟಿ ಸೇರಿ ಕಾಲೇಜಿನ ಪ್ರಾಧ್ಯಾಪಕ ವೃಂದ, ಸಿಬ್ಬಂದಿ, ವಿದ್ಯಾರ್ಥಿಗಳಿದ್ದರು. ವಿದ್ಯಾರ್ಥಿನಿಯರಾದ ಸುಪ್ರಿಯಾ, ಸ್ಮಿತಾ, ವೈಷ್ಣವಿ, ಪ್ರತಿಮಾ ನಿರೂಪಿಸಿದರು.

## ಪೋಕ್ಸೊ ಪ್ರಕರಣ: ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿಚಾರಣೆಗೆ ತಡೆಯಾಜ್ಞೆ ನೀಡಿದ ಸುಪ್ರೀಂ ಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪೋಕ್ಸೊ ಪ್ರಕರಣದ ಮೊದಲ ಆರೋಪಿಯಾಗಿರುವ ಮಾಜಿ ಮುಖ್ಯಮಂತ್ರಿ, ಬಿಜೆಪಿ ನಾಯಕ ಬಿ.ಎಸ್.ಯಡಿಯೂರಪ್ಪ ಅವರ ವಿರುದ್ಧ ಬೆಂಗಳೂರಿನ ಎಫ್‌ಟಿಎಸ್ ವಿಶೇಷ ಸೆಷನ್ಸ್ ನ್ಯಾಯಾಲಯ ಹೊರಡಿಸಿದ್ದ ಸಮನ್ಸ್ ಹಾಗೂ ವಿಚಾರಣಾ ಪ್ರಕ್ರಿಯೆಗೆ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಪೀಠ ತಡೆಯಾಜ್ಞೆ ನೀಡಿದೆ.

ಪ್ರಕರಣದ ಆರೋಪಿಗಳಾದ ಬಿ.ಎಸ್.ಯಡಿಯೂರಪ್ಪ, ವೈ.ಎಂ.ಅರುಣ, ಎಂ.ರುದ್ರೇಶ ಹಾಗೂ ಜಿ.ಮರಿಸ್ವಾಮಿ ಅವರಿಗೆ ಸಮನ್ಸ್ ಜಾರಿಗೊಳಿಸಿದ್ದ ವಿಶೇಷ ಸೆಷನ್ಸ್ ನ್ಯಾಯಾಲಯವು ಡಿಸೆಂಬರ್ 2ರಂದು ಕೋರ್ಟ್‌ಗೆ ಖುದ್ದು ಹಾಜರಾಗುವಂತೆ ಆದೇಶಿಸಿತ್ತು.

# ನಿತ್ಯ ಶರಣರ ತತ್ವ ಪಠಿಸುವಂತಾಗಲಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

12ನೇ ಶತಮಾನದ ಸಂತರು, ಶರಣರ ತತ್ವ ಸಿದ್ಧಾಂತಗಳು ಇಂದಿಗೂ ಮಾದರಿಯಾಗಿದ್ದು, ನಿತ್ಯ ಮನೆಯಲ್ಲಿ ಅವರ ವಚನಗಳನ್ನು ಪಠಿಸಬೇಕು ಎಂದು ನಿವೃತ್ತ ಉಪನ್ಯಾಸಕ ಬಿ.ಜಿ. ಯಳವತ್ತಿ ಹೇಳಿದರು.

ಅವರು ಪಟ್ಟಣದ ಡಾ. ಎಸ್.ಸಿ. ಚವಡಿ ಅವರ ನಿವಾಸದಲ್ಲಿ ಮುಳಗುಂದ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ವೇದಿಕೆ ವತಿಯಿಂದ 'ಮನೆ–ಮನದಲ್ಲಿ ಶರಣರ ಸಂಸ್ಕೃತಿ' ಕಾರ್ಯಕ್ರಮದಲ್ಲಿ ಮಾತನಾಡಿ, ಇಂದು ಆಧುನಿಕತೆ ಬೆಳೆದಂತೆ ಶರಣರ ತತ್ವ–ಸಿದ್ಧಾಂತಗಳು ಕಣ್ಮರೆಯಾಗುತ್ತಿದ್ದು, ಶರಣರ ವಚನಗಳ ಭಂಡಾರ ಕಾಪಾಡುವಲ್ಲಿ ವಚನ ಪಿತಾಮಹ ಫ.ಗು. ಹಳಕಟ್ಟಿಯವರ ಕೊಡುಗೆ ಅಪಾರವಾಗಿದೆ. ಆ ವಚನಗಳನ್ನು ನಿತ್ಯ ಮನೆಯಲ್ಲಿ ಪಠಿಸುವುದರಿಂದ ಮಕ್ಕಳು ಉತ್ತಮ ಆಚಾರ–ವಿಚಾರ, ಸಂಸ್ಕಾರ ಅಳವಡಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ಕನ್ನಡದ ಶರಣರ ವಚನದಲ್ಲಿ ಸತ್ವ ಅಡಕವಾಗಿದ್ದು, ಸುಂದರ ಬದುಕು ನಿರ್ಮಿಸಿಕೊಳ್ಳಲು ವಚನ ಸಾಹಿತ್ಯ ಸಹಕಾರಿಯಾಗಿದೆ ಎಂದರು.

ಕದಳಿ ವೇದಿಕೆ ಅಧ್ಯಕ್ಷೆ ರಾಜೇಶ್ವರಿ ಬಡ್ನಿ ಮಾತನಾಡಿ, ಇಂದಿನ ಮಕ್ಕಳಿಗೆ ಮನೆಯಲ್ಲಿ ಲಿಂಗ ಪೂಜೆ, ಧ್ಯಾನ ಪರಿಪಾಠ ಬೆಳೆಸಿದಲ್ಲಿ ಮಕ್ಕಳಲ್ಲಿ ಏಕಾಗ್ರತೆ ಹೆಚ್ಚುವುದು. ಇದರಿಂದ ಮಕ್ಕಳ ಮನಸ್ಸು ಉಲ್ಲಾಸಭರಿತವಾಗಿ ಇರಲು ಸಾಧ್ಯವಾಗುತ್ತದೆ ಎಂದರು.

ಬಿ.ಜಿ. ಯಳವತ್ತಿ, ಶೋಭಾ ಪಾಟೀಲ, ಉಮಾ ಬ್ಯಾಳಿ, ದೇವಕ್ಕ ಉಮಚಗಿ, ಪ್ರಕಾಶ ಮದ್ದಿನ, ಮಂಜುನಾಥ ಬಿಳೆಯಲಿ, ಶಿವಾನಂದ ಆಪ್ತಗೇರಿ, ಮುತ್ತಪ್ಪ ಹುಡೇದ ಹಾಗೂ ಶರಣ ಸಾಹಿತ್ಯ ಪರಿಷತ್ತು, ಕದಳಿ ವೇದಿಕೆಗಳ ಸರ್ವ ಸದಸ್ಯರು ಇದ್ದರು.

# ಧ್ಯಾನ ಮನುಷ್ಯನನ್ನು ನಿರ್ಮಲಚಿತ್ತನನ್ನಾಗಿಸುತ್ತದೆ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಧ್ಯಾನವು ಮನುಷ್ಯನ ದೈಹಿಕ, ಮಾನಸಿಕ ಆರೋಗ್ಯ, ನೆಮ್ಮದಿ, ಶಾಂತಿ ನೀಡುವ ದಿವ್ಯೌಷಧಿಯಾಗಿದೆ ಮತ್ತು ಮಾನವನನ್ನು ಮಹಾದೇವನನ್ನಾಗಿಸುವ ದಿವ್ಯಶಕ್ತಿ ಧ್ಯಾನದಿಂದ ಪ್ರಾಪ್ತವಾಗುತ್ತದೆ ಎಂದು ಎಂದು ಬ್ರಹ್ಮಶ್ರೀ ಪ್ರೇಮನಾಥ ಜೀ ಹೇಳಿದರು.

ಅವರು ಪಟ್ಟಣದ ಚಂಬಣ್ಣ ಬಾಳಿಕಾಯಿ ಅವರ ಜಿನ್ನಿಂಗ್ ಮಿಲ್ ಪ್ರಾಂಗಣದಲ್ಲಿ ಗದಗ ಪಿರಾಮಿಡ್ ಸ್ಪಿರಿಚ್ಯುವಲ್ ಸೊಸೈಟಿ ಹಾಗೂ ಲಕ್ಷ್ಮೇಶ್ವರ ಧ್ಯಾನ ಪರಿವಾರದಿಂದ ಮಂಗಳವಾರ ಹಮ್ಮಿಕೊಂಡಿದ್ದ ಧ್ಯಾನ ಮತ್ತು ಸತ್ಸಂಗ ಕಾರ್ಯಕ್ರಮದಲ್ಲಿ ಮಾತನಾಡಿದರು.

ಧ್ಯಾನ ಮನುಷ್ಯನಲ್ಲಿನ ಭಯ, ದುಃಖ, ಮಾನಸಿಕ ಒತ್ತಡವನ್ನು ಹೋಗಲಾಡಿಸಿ ನಿರ್ಮಲಚಿತ್ತನನ್ನಾಗಿಸುತ್ತದೆ. ಪ್ರಸ್ತುತ ಒತ್ತಡದ ಬದುಕಿನಲ್ಲಿ ಆರೋಗ್ಯಕರ ಜೀವನಕ್ಕಾಗಿ ಧ್ಯಾನ, ಯೋಗಗಳು ಪ್ರತಿಯೊಬ್ಬರ ಜೀವನದ ಅವಿಭಾಜ್ಯ ಅಂಗಗಳಾಗಬೇಕು. ದೇಹದಲ್ಲಿ ನಾಡಿ ಮಂಡಲಗಳು ಶುದ್ಧವಾಗಿ ರೋಗಗಳಿಂದ ಮುಕ್ತಿ ಹೊಂದಿ ಜೀವನವನ್ನು ಪ್ರತಿಕ್ಷಣ ಆನಂದದಿಂದ ಸಂಭ್ರಮಿಸಬೇಕು. ಧ್ಯಾನ, ಸತ್ಸಂಗ, ಸಂಸ್ಕಾರದ ಪರಿಣಾಮದಿಂದ ಪರಿಪೂರ್ಣ ಹಾಗೂ ಶ್ರೇಷ್ಠತೆಯ ಬದುಕು ಪ್ರಾಪ್ತಿಯಾಗುತ್ತದೆ. ಸತ್ಸಂಗ ಮತ್ತು ಸಂಸ್ಕಾರವನ್ನೇ ಬಂಡವಾಳವಾಗಿಸಿಕೊಂಡ ವ್ಯಕ್ತಿ ಸಮಾಜದಲ್ಲಿ ಶ್ರೇಷ್ಠತೆಯನ್ನು ಸಾಧಿಸಬಲ್ಲವನಾಗುತ್ತಾನೆ. ಇವು ಸಾತ್ವಿಕ ಮನಸ್ಸುಗಳನ್ನು ಕಟ್ಟಿ ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಸಹಾಯಕವಾಗುತ್ತವೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಪಿರಾಮಿಡ್ ಜ್ಞಾನದಿಂದ ಮನುಷ್ಯ ಅರೋಗ್ಯದಿಂದ ಇರಬಹುದು. ಧ್ಯಾನ–ಸತ್ಸಂಗ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಂಡು ಸುಖೀ ಜೀವನ ನಡೆಸಬೇಕು ಎಂದು ಹೇಳಿದರು. ಚಂಬಣ್ಣ ಬಾಳಿಕಾಯಿ, ಹಿರಿಯ ನಾಗರಿಕರ ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿದರು. ವಿದ್ಯಾರಾಣಿ ಕೂಬಳ್ಳಿ ಪಿರಾಮಿಡ್ ಧ್ಯಾನದ ಬಗ್ಗೆ ಮಾತನಾಡಿದರು. ಈ ಸಂದರ್ಭದಲ್ಲಿ ಕಾರ್ಯಕ್ರಮದ ಸಂಘಟಕ ಸುಭಾಸ ಓದುನವರ, ನೇತ್ರಾವತಿ ಕಟಗೇರಿ, ಚನ್ನಪ್ಪ ಕೋಲಕಾರ, ಪ್ರಕಾಶ ಉಪನಾಳ, ಆಯ್.ಎಸ್. ಮಡಿವಾಳರ, ಗುರು ಬಾಳಿಹಳ್ಳಿಮಠ, ಮಾಲದೇವಿ ದಂದರಗಿ, ದಿಗಂಬರ ಪೂಜಾರ ಮುಂತಾದವರು ಪಾಲ್ಗೊಂಡಿದ್ದರು.

## 'ನಮ್ಮಲ್ಲಿ ಭಿನ್ನಾಭಿಪ್ರಾಯಗಳಿಲ್ಲ, ಒಗ್ಗಟ್ಟಿನಿಂದ ಇದ್ದೇವೆ: ನಾನು, ಡಿ.ಕೆ. ಶಿವಕುಮಾರ್ ಸಹೋದರರಿದ್ದಂತೆ': ಸಿಎಂ ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

'ನಾನು ಹಾಗೂ ಉಪಮುಖ್ಯಮಂತ್ರಿಗಳು ಸಹೋದರರಿದ್ದಂತೆ, ಒಂದೇ ಪಕ್ಷದಲ್ಲಿದ್ದು, ಒಂದೇ ಸಿದ್ಧಾಂತ ನಂಬಿಕೊಂಡಿದ್ದೇವೆ, 2028ರ ಚುನಾವಣೆಯಲ್ಲಿಯೂ ಒಟ್ಟಿಗೆ ಕೆಲಸ ಮಾಡಿ ಪಕ್ಷವನ್ನು ಅಧಿಕಾರಕ್ಕೆ ತರಲಾಗುವುದು' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಡಿಸೆಂಬರ್ 2, ಮಂಗಳವಾರ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಆಹ್ವಾನದ ಮೇರೆಗೆ ಬೆಳಗಿನ ಉಪಹಾರಕ್ಕಾಗಿ ಅವರ ನಿವಾಸಕ್ಕೆ ಭೇಟಿದ ಸಂದರ್ಭದಲ್ಲಿ ಅವರು ಮಾತನಾಡಿದರು.

### ಜಿಲ್ಲಾ ಮಟ್ಟದ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಬಿ.ಬಿ. ಅಸೂಟಿ

# ಗ್ಯಾರಂಟಿ ಅನುಷ್ಠಾನದಲ್ಲಿ ಗದಗ ಜಿಲ್ಲೆ ಪ್ರಥಮ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿಯೇ ಗದಗ ಜಿಲ್ಲೆಯು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಶೇ. 99.4ರಷ್ಟು ಗುರಿ ಸಾಧಿಸಿ ಪ್ರಥಮ ಸ್ಥಾನದಲ್ಲಿದೆ. ಈ ಸಾಧನೆಗೆ ಜಿಲ್ಲೆಯ ಗ್ಯಾರಂಟಿ ಯೋಜನೆಗಳ ಇಲಾಖಾಧಿಕಾರಿಗಳು ಹಾಗೂ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸಮಿತಿಯ ಸದಸ್ಯರು ಕಾರಣೀಭೂತರಾಗಿದ್ದಾರೆ ಎಂದು ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ಪ್ರಶಂಶಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತ ಸಭೆಯ ಅದ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ಯಾರಂಟಿ ಅನುಷ್ಠಾನದಲ್ಲಿ ರಾಜ್ಯದಲ್ಲಿಯೇ ಪ್ರಥಮ ಸ್ಥಾನ ಹೊಂದಲು ಸಕಾಲದಲ್ಲಿ ಸೂಕ್ತ ಮಾರ್ಗದರ್ಶನವನ್ನು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ನೀಡುವ ಮೂಲಕ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಪಂಚ ಗ್ಯಾರಂಟಿ ಸೇರಿದಂತೆ ಅಭಿವೃದ್ಧಿ ಕಾಮಗಾರಿಗಳಿಗೂ ಸಹ ಆದ್ಯತೆ ನೀಡುವ ಮೂಲಕ ಸಚಿವ ಎಚ್.ಕೆ. ಪಾಟೀಲರು ಮಾರ್ಗದರ್ಶಕರಾಗಿದ್ದಾರೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಬಿಪಿಎಲ್ ಕಾರ್ಡ್‌ಗಳು ವಿವಿಧ ಕಾರಣಗಳಿಂದ ರದ್ದಾಗಿವೆ. ಕೆಲವೊಂದು ಬಿಪಿಎಲ್ ಕಾರ್ಡ್‌ಗಳು ವಿನಾಕಾರಣ ರದ್ದಾಗಿರುವ ಕುರಿತು ಸಾರ್ವಜನಿಕರಿಂದ ದೂರುಗಳು ಸಮಿತಿಯ ಗಮನಕ್ಕೆ ಬಂದಿವೆ. ಈ ಕುರಿತು ತಹಸೀಲ್ದಾರರು ಹಾಗೂ ಆಹಾರ ನಿರೀಕ್ಷಕರು (food inspector) ಜಂಟಿಯಾಗಿ ಸ್ಥಾನಿಕ ಪರಿಶೀಲನೆ ನಡೆಸಿ ಸೂಕ್ತ



ಕ್ರಮ ವಹಿಸಬೇಕು. ಬಿಪಿಎಲ್ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ಒದಗಿಸಲು ಅಧಿಕಾರಿಗಳು ಶ್ರಮಿಸಬೇಕು. ಆಯಾ ತಾಲೂಕಿನಲ್ಲಿ ಬಿಪಿಎಲ್ ಕಾರ್ಡ್ ರದ್ದಾದ ಪಟ್ಟಿಯನ್ನು ಸಮಿತಿಯ ಗಮನಕ್ಕೆ ತರಬೇಕು ಎಂದರು.

ಸರ್ಕಾರದಿಂದ ಜಾರಿಯಾಗಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶ ಹೊಂದಿದ್ದು, ಈ ಯೋಜನೆಗಳ ಅನುಷ್ಠಾನವು ಬಡಜನರ ಸೇವೆಗೆ ಒದಗಿಸಿದ ಬಹುದೊಡ್ಡ ಅವಕಾಶವಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ವಿಶೇಷ ಆಸಕ್ತಿ ವಹಿಸಿ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಿದರು.

ಪ್ರಗತಿ ಪರಿಶೀಲನಾ ಸಭೆಯಲ್ಲಿ ಗೃಹಲಕ್ಷ್ಮೀ ಹಾಗೂ ಅನ್ನಭಾಗ್ಯ ಯೋಜನೆ ಕುರಿತಂತೆ ಅಧಿಕಾರಿಗಳಿಂದ ಸವಿಸ್ತಾರವಾಗಿ ಮಾಹಿತಿ ಪಡೆದು ಇನ್ನೂ ಹೆಚ್ಚಿನ ಪ್ರಗತಿ ಸಾಧನೆಗೆ ಅಧ್ಯಕ್ಷ ಬಿ.ಬಿ. ಅಸೂಟಿ ಸೂಚನೆ ನೀಡಿದರು.

ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಸರ್ಕಾರದ ಸಭೆ-ಸಮಾರಂಭಗಳು ಹಾಗೂ ಜಯಂತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಾಗ ಹಾಗೂ ಆಮಂತ್ರಣ ಪತ್ರಿಕೆ ಮುದ್ರಿಸುವಾಗ ಸಂಬಂಧಿತ ಅಧಿಕಾರಿಗಳು ಕಡ್ಡಾಯವಾಗಿ ಶಿಷ್ಟಾಚಾರ ಪಾಲನೆಯಾಗುವಂತೆ ನೋಡಿಕೊಳ್ಳಬೇಕು ಎಂದು ಬಿ.ಬಿ. ಅಸೂಟಿಅವರು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ವಾ.ಕ.ರ.ಸಾ ಸಂಸ್ಥೆಯಿಂದ 11-6-2023ರಿಂದ 31-10-2025ರವರೆಗೆ ಒಟ್ಟು 12.73 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಶಕ್ತಿ ಯೋಜನೆಯಡಿ 423.02 ಕೋಟಿ ರೂ. ಮಹಿಳಾ ಪ್ರಯಾಣಿಕರ ಆದಾಯವಾಗಿದೆ. ಗೃಹಜ್ಯೋತಿ ಯೋಜನೆಯಡಿ 31-10-2025ರವರೆಗೆ 274038 ಸ್ಥಾವರಗಳ ನೋಂದಣಿಯಾಗಿದ್ದು, ಶೇ. 98.49ರಷ್ಟು ಪ್ರಗತಿಯಾಗಿದೆ.

ಯುವನಿಧಿ ಯೋಜನೆಯಡಿ ಜನವರಿ 2024ರಿಂದ ಜುಲೈ 2025ರವರೆಗೆ 5,834 ಅರ್ಜಿಗಳು ಸ್ವೀಕೃತವಾಗಿವೆ. ಅದರಲ್ಲಿ 4,879 ಅರ್ಹ ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆಯಾಗಿದೆ. ಬಾಕಿ ಉಳಿದಿರುವ 955 ಅಭ್ಯರ್ಥಿಗಳು ಯುವನಿಧಿ ಯೋಜನೆಯ ಷರತ್ತುಗಳಿಗೆ ಹಂತ ಹಂತವಾಗಿ ಅರ್ಹರಾಗುತ್ತಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಪಿ.ಬಿ. ಅಳಗವಾಡಿ, ಹೇಮಂತಗೌಡ ಪಾಟೀಲ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಮಿತಿಯ ಸದಸ್ಯರು, ಪಂಚ ಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

> ಗದಗ ತಾಲೂಕು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ, ಜಿಲ್ಲೆಯ ಬಸ್ ನಿಲ್ದಾಣಗಳಲ್ಲಿ ಮೂಲಭೂತ ಸೌಕರ್ಯದೊಂದಿಗೆ ಮಹಿಳೆಯರಿಗೆ ಆಸನ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಆರೋಗ್ಯಕರ ವಾತಾವರಣ ಕಾಪಾಡಲು ಸ್ವಚ್ಛತೆ ಪ್ರಮುಖ ಕಾರಣವಾಗಿರುವುದರಿಂದ ಎಲ್ಲ ಬಸ್ ನಿಲ್ದಾಣಗಳು ಸ್ವಚ್ಛವಾಗಿರುವಂತೆ ಕ್ರಮ ವಹಿಸಬೇಕು. ಗೃಹಜ್ಯೋತಿ ಯೋಜನೆ ಸೌಲಭ್ಯ ಅರ್ಹ ಎಲ್ಲ ಫಲಾನುಭವಿಗಳಿಗೆ ಒದಗುವಂತಾಗಬೇಕು. ಈ ನಿಟ್ಟಿನಲ್ಲಿ ಹೆಸ್ಕಾಂ ಇಲಾಖೆಯ ಅಧಿಕಾರಿಗಳು ಶ್ರದ್ಧೆಯಿಂದ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

## ಪ್ರತಿಪಕ್ಷಗಳ ಪ್ರತಿಭಟನೆಗೆ ಮಣಿದ ಕೇಂದ್ರ : ಡಿ.9ರಂದು ಸಂಸತ್ತಿನಲ್ಲಿ ಎಸ್‌ಐಆರ್ ಚರ್ಚೆ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಂಸತ್ತಿನ ಉಭಯ ಸದನಗಳಲ್ಲಿ ಎರಡು ದಿನಗಳಿಂದ ಪ್ರತಿಪಕ್ಷಗಳು ನಡೆಸಿದ ತೀವ್ರ ಪ್ರತಿಭಟನೆಗೆ ಕೇಂದ್ರ ಸರ್ಕಾರ ಮಣಿದಿದೆ. ಡಿಸೆಂಬರ್ 9ರಂದು ಚುನಾವಣಾ ಸುಧಾರಣೆಗಳು ಎಂಬ ವಿಷಯದ ಅಡಿಯಲ್ಲಿ ಎಸ್‌ಐಆರ್ ಕುರಿತು ಚರ್ಚೆ ನಡೆಸಲು ಒಪ್ಪಿಕೊಂಡಿದೆ.

ವರದಿಗಳ ಪ್ರಕಾರ, ಬಿಹಾರದ ಎಸ್‌ಐಆರ್ ಯಶಸ್ಸಿನ ಉದಾಹರಣೆ ಕೊಟ್ಟು ಎಸ್‌ಐಆರ್ ಪ್ರಕ್ರಿಯೆಯನ್ನು ಬಲವಾಗಿ ಸಮರ್ಥಿಸಿಕೊಳ್ಳಲು ಕೇಂದ್ರ ಸರ್ಕಾರ ಯೋಜಿಸಿದೆ. ಡಿಸೆಂಬರ್ 8ರಂದು ವಂದೇ ಮಾತರಂ ಕುರಿತು ಚರ್ಚೆ ನಡೆಸಲೂ ನಿರ್ಧರಿಸಿದೆ.

ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರ ಅಧ್ಯಕ್ಷತೆಯಲ್ಲಿ ನಡೆದ ಸರ್ವಪಕ್ಷ ಸಭೆಯಲ್ಲಿ ಡಿಸೆಂಬರ್ 8ರಂದು ಸೋಮವಾರ ಮಧ್ಯಾಹ್ನ 12ಗಂಟೆಯಿಂದ 'ವಂದೇ ಮಾತರಂ' ಕುರಿತು ಹಾಗೂ ಡಿಸೆಂಬರ್ 9ರಂದು ಮಂಗಳವಾರ ಮಧ್ಯಾಹ್ನ 12 ಗಂಟೆಯಿಂದ ಚುನಾವಣಾ ಸುಧಾರಣೆಗಳ ಕುರಿತು ಚರ್ಚೆ ನಡೆಸಲು ನಿರ್ಧರಿಸಲಾಗಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೂ ಮುನ್ನ ನವೆಂಬರ್ 30ರಂದು ಭಾನುವಾರ ನಡೆದ ಸರ್ವಪಕ್ಷ ಸಭೆಯಲ್ಲಿ ಎಸ್‌ಐಆರ್ ಕುರಿತು ಚರ್ಚೆ ನಡೆಸಬೇಕು ಎಂದು ಪ್ರತಿಪಕ್ಷಗಳು ಬೇಡಿಕೆ ಇಟ್ಟಿತ್ತು. ಚರ್ಚೆಗೆ ಅವಕಾಶ ನೀಡದಿದ್ದರೆ ಕಲಾಪ ನಡೆಯಲು ಬಿಡುವುದಿಲ್ಲ ಎಂದಿತ್ತು.

## ಏಡ್ಸ್ ಸೋಂಕಿತರು ಎದೆಗುಂದದಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣಘಟಕ, ಜಿಲ್ಲಾ ವಾರ್ತಾ & ಪ್ರಸಾರ ಇಲಾಖೆ, ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟ, ಚೈತನ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ ಗದಗ ಇವರುಗಳ ಸಹಯೋಗದೊಂದಿಗೆ ನಗರದ ಗಾಂಧಿ ವೃತ್ತದಲ್ಲಿ ವಿಶ್ವ ಏಡ್ಸ್ ದಿನದ ನಿಮಿತ್ತ ಕ್ಯಾಂಡಲ್ ದಿನ ಮತ್ತು ಮೌನಾಚರಣೆ ಕಾರ್ಯಕ್ರಮ ಜರುಗಿತು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ, ಹೆಚ್.ಐ.ವಿ ಸೋಂಕಿನಿಂದ ಮರಣಿಸಿದವರ ಸಂತಾಪ ಸೂಚಕವಾಗಿ ಶೋಕ ವ್ಯಕ್ತಪಡಿಸಲು ಹಾಗೂ ಅವರಿಗೆ ಚಿರಶಾಂತಿ ಕೋರಲು ಕ್ಯಾಂಡಲ್ ದಿನವನ್ನು ಹಮ್ಮಿಕೊಂಡಿದ್ದು, ಸೋಂಕಿತರು ಎದೆಗುಂದದೆ ಮಾನಸಿಕ ಸ್ಥೈರ್ಯ ಮತ್ತು ಸದೃಢತೆಯಿಂದ ಜೀವನ ಸಾಗಿಸಲು ಸಂಘ-ಸಂಸ್ಥೆಗಳು ಇಲಾಖೆಯೊಂದಿಗೆ ಕೈಜೋಡಿಸಿ ಶ್ರಮಿಸಲು ತಿಳಿಸಿದರು.

ಮಾಜಿ ನಗರಸಭಾ ಸದಸ್ಯ ಸತೀಶ ಪರ್ವತಗೌಡರ, ಎ.ಆರ್.ಟಿ. ಕೇಂದ್ರದ ಸಿಬ್ಬಂದಿ, ಐ.ಸಿ.ಟಿ.ಸಿ ಸಿಬ್ಬಂದಿ, ಡ್ಯಾಪ್ಕ್ಯೂ ಸಿಬ್ಬಂದಿ, ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟದ ಹಜರತಬಿ ಹಾಗೂ ಸದಸ್ಯರು, ಚೈತನ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸುನೀಲ ಹಾಗೂ ಸದಸ್ಯರು, ಆರೋಗ್ಯ ಇಲಾಖೆಯ ಸಿಬ್ಬಂದಿ, ಎನ್.ಜಿ.ಓ. ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಸುಮಿತ್ರಾ ಮಾವಿನಕಾಯಿ ಪ್ರಾರ್ಥಿಸಿದರು. ಬಸವರಾಜ ಲಾಳಗಟ್ಟಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಸಂತೋಷ ಬಡಿಗೇರ ವಂದಿಸಿದರು.



## ಚುನಾವಣೆಯಲ್ಲಿ ಎಲ್ಲರ ಆಶೀರ್ವಾದವಿರಲಿ




■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ 30 ವರ್ಷಗಳಿಂದ ಕಾರ್ಯಪ್ರವೃತ್ತನಾಗಿದ್ದು, ಈಗ ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಸ್ಪರ್ಧಿಸಲು ಕಾಂಗ್ರೆಸ್ ಪಕ್ಷದ ಆಕಾಂಕ್ಷಿಯಾಗಿದ್ದೇನೆ. ಹಾಗಾಗಿ ಎಲ್ಲರ ಸಹಕಾರ ಅತ್ಯವಶ್ಯಕ ಎಂದು ಡಾ. ಎಸ್.ಜಿ. ಸೊನೆಖಾನ್ ಹೇಳಿದರು.

ಮಂಗಳವಾರ ಇಲ್ಲಿನ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನಾನು ಮೂಲತಃ ಗದಗ ಜಿಲ್ಲೆಯವನೇ ಆಗಿದ್ದೇನೆ. ಉತ್ತರ ಕರ್ನಾಟಕದ ಯುವಕರಿಗೆ ಪ್ರವಾಸೋದ್ಯಮ ಸೇರಿದಂತೆ ಅನೇಕ ಕ್ಷೇತ್ರದಲ್ಲಿ ವಿಫುಲ ಅವಕಾಶಗಳಿವೆ. ಆದರೆ ಕೌಶಲ್ಯದ ಕೊರತೆಯಿಂದ ಯುವಕರು ಹಿಂದುಳಿಯುತ್ತಿದ್ದಾರೆ. ನನ್ನ 30 ವರ್ಷದ ಶಿಕ್ಷಣ ಮತ್ತು ಸಾಮಾಜಿಕ ಸೇವಾ ಕ್ಷೇತ್ರದಲ್ಲಿನ ಅನುಭವಗಳನ್ನು ಯುವ ಜನತೆಯೊಂದಿಗೆ ಹಂಚಿಕೊಂಡು ಯುವಕರ ಶಕ್ತಿಯೊಂದಿಗೆ ಉನ್ನತವಾದ ಕರ್ನಾಟಕವನ್ನು ನಿರ್ಮಾಣ ಮಾಡುವ ಉದ್ದೇಶದಿಂದ ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಸ್ಪರ್ಧಿಸಲು ಉತ್ಸುಕನಾಗಿದ್ದು, ಎಲ್ಲರ ಬೆಂಬಲವನ್ನು ನಿರೀಕ್ಷಿಸುತ್ತೇನೆ ಎಂದರು.

ಕಾಂಗ್ರೆಸ್ ಪಕ್ಷದಿಂದ ಟಿಕೆಟ್ ನೀಡದಿದ್ದರೆ ಪಕ್ಷೇತರವಾಗಿ ಸ್ಪರ್ಧಿಸುತ್ತೀರಾ ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಪಕ್ಷದಲ್ಲಿ ನಾನು ಹಲವಾರು ವರ್ಷದಿಂದ ಸೇವೆ ಸಲ್ಲಿಸಿದ್ದೇನೆ. ಹಾಗಾಗಿ ನನಗೆ ಟಿಕೆಟ್ ಸಿಗುವ ಭರವಸೆಯಿದೆ. ಟಿಕೆಟ್ ಸಿಗದಿದ್ದರೆ ಪಕ್ಷೇತರವಾಗಿ ಸ್ಪರ್ಧಿಸುವುದಿಲ್ಲ ಎಂದರು.

ಈ ಸಂದರ್ಭದಲ್ಲಿ ಬಸವರಾಜ ಕಲ್ಲೋಡಿ, ಸೋಮಶೇಖರ್ ಹೊನಗುಡಿ, ಹಸನಸಾಬ್ ಮುಳಗುಂದ ಮುಂತಾದವರಿದ್ದರು.

### ರಾಜ್ಯಮಟ್ಟದ ಹೊನಲು ಬೆಳಕಿನ ಕೆ.ಜಿ. ವಿಭಾಗದ ಕಬಡ್ಡಿ ಪಂದ್ಯಾವಳಿ

## ಕ್ರೀಡೆಯಿಂದ ಮನೋಬಲ ವೃದ್ಧಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಕ್ರೀಡಾಕೂಟವು ನಮ್ಮಲ್ಲಿ ದೈಹಿಕ ಕ್ಷಮತೆ ಬೆಳೆಸುವುದಷ್ಟೇ ಅಲ್ಲ, ಮನೋಬಲವನ್ನು ಗಟ್ಟಿಗೊಳಿಸುತ್ತದೆ. ಗೆಲುವಿನಲ್ಲಿ ವಿನಯ ಮತ್ತು ಸೋಲಿನಲ್ಲಿ ಸಹಿಷ್ಣುತೆ ಕಲಿಸುವ ಮಹತ್ವದ ವೇದಿಕೆ ಕ್ರೀಡೆಯಾಗಿದೆ ಎಂದು ತೋಂಟದಾರ್ಯ ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಹೇಳಿದರು.

ಡಂಬಳ ಗ್ರಾಮದ ತೋಂಟದಾರ್ಯ ಆವರಣದಲ್ಲಿ ಯೂಥ್ ಫಾರ್ ಚೇಂಜ್ ವೇದಿಕೆ ಹಾಗೂ ಅಹಿಂದ ಜನತಾ ಸಂಘ, ಗದಗ ಜಿಲ್ಲಾ ಅಮೆಚೂರ್ ಅಸೋಸಿಯೇಷನ್ ಸಂಯುಕ್ತ ಆಶ್ರಯದಲ್ಲಿ ಪ್ರಪ್ರಥಮ ಬಾರಿಗೆ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಹೊನಲು ಬೆಳಕಿನ ಕೆ.ಜಿ. ವಿಭಾಗದ ಕಬಡ್ಡಿ ಪಂದ್ಯಾವಳಿ ಉದ್ಘಾಟಿಸಿ ಅವರು ಮಾತನಾಡಿದರು.

ಜಗತ್ತು ಬದಲಾವಣೆಯಾದಂತೆ ಮನುಷ್ಯನ ಆರೋಗ್ಯ ಕ್ಷೀಣಿಸುತ್ತಾ ಹೋಗುತ್ತಿದೆ. ಆ ಹಿನ್ನೆಲೆಯಲ್ಲಿ ಯೋಗಾಸನ ಕ್ರೀಡೆಗೆ ಆದ್ಯತೆ ನೀಡಬೇಕು. ಇಂತಹ ಕಾರ್ಯಕ್ಕೆ ಯುವಕರು ಮುಂದಾಗಿರುವುದು ಪ್ರಶಂಸನೀಯ ಎಂದು ಹೇಳಿದರು.

ದೈಹಿಕ ಶಿಕ್ಷಕ ಎಸ್.ಎಸ್. ಕೆಂಬಾವಿ ಮಾತನಾಡಿ, ದುಶ್ಚಟಗಳಿಂದ ಮುಕ್ತವಾಗಿರಲು ಕ್ರೀಡೆ ಸಹಕಾರಿ. ದೈಹಿಕವಾಗಿ, ಮಾನಸಿಕವಾಗಿ ಸದೃಢತೆ ಸಾಧಿಸಲು ಕ್ರೀಡೆಯಿಂದ ಮಾತ್ರ ಸಾಧ್ಯ. ಸತತ ಪ್ರಯತ್ನದಿಂದ ಮಾನಸಿಕವಾಗಿ ಸದೃಢತೆಯ ಮೂಲಕ ಎಲ್ಲಾ ಆಯಾಮಗಲ್ಲಿ ಆಡುವುದು ಮುಖ್ಯವಾಗಿದೆ. ಯುವಕರು ಉತ್ತಮ ಆರೋಗ್ಯಕ್ಕೆ ಆದ್ಯತೆ ನೀಡುವುದಕ್ಕಾಗಿ ಕ್ರೀಡಾ ಮನೋಭಾವನೆಯನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಲು ಮುಂದಾಗಬೇಕು ಎಂದು ಹೇಳಿದರು.

ಬರದೂರ ಗ್ರಾಮದ ಹರಿಓಂ ಸ್ಪೋರ್ಟ್ಸ್ ಕ್ಲಬ್ ಪ್ರಥಮ, ಶಿರುಂದ ಗ್ರಾಮದ ಚೆನ್ನವೀರ ಕಣವಿ ಅಭಿಮಾನಿ ಬಳಗ ದ್ವಿತೀಯ, ಮರುಳಸಿದ್ದೇಶ್ವರ ತೃತೀಯ, ಡೋಣಿ ಗ್ರಾಮದ ಕ್ರೀಡಾಳುಗಳು 4ನೇ ಸ್ಥಾನ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಉಪತಹಸೀಲ್ದಾರ ಎಸ್.ಎಸ್. ಬಿಚಾಲಿ, ಭೀಮಪ್ಪ ಗದಗಿನ, ಬುಡ್ನೆಸಾಬ ಅತ್ತಾರ, ಮಂಜುನಾಥ ಸಂಜೀವಣ್ಣವರ, ಶಿವು ಮಠದ, ಶಿವನಗೌಡ ಪಾಟೀಲ, ರಾಮಪ್ಪ ಹೊಸಕೇರಿ, ಮಾಜಿ ಸೈನಿಕ ಕಾಸಿಮಲಿ ಬೆನಕೊಪ್ಪ, ಕೆ.ಕೆ. ಹೂಗಾರ, ಅಪೂರ್ವ ಮಾದರ, ಪ್ರಕಾಶ ಮೇಗೂರ, ಹರೀಶ ಯಲಭೋವಿ, ಆದಿತ್ಯ ಗದಗಿನ ಸೇರಿದಂತೆ ಸಂಘದ ಸದಸ್ಯರು, ಗ್ರಾಮದ ಹಿರಿಯರು, ಯುವಕರು ಇದ್ದರು. ಆರ್.ಜಿ. ಕೊರ್ಲಹಳ್ಳಿ ನಿರೂಪಿಸಿ ವಂದಿಸಿದರು.

## ಬೆಳಗಾವಿಯಲ್ಲಿ ಕಾಟಾಚಾರದ ಅಧಿವೇಶನ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸರಕಾರ ಉತ್ತರ ಕರ್ನಾಟಕದ ಶಕ್ತಿ ಕೇಂದ್ರವಾದ ಬೆಳಗಾವಿಯಲ್ಲಿ ಕಾಟಾಚಾರಕ್ಕೆ ಅಧಿವೇಶನ ನಡೆಸುತ್ತಿದೆ. ಕನಿಷ್ಠ 20 ದಿನಗಳ ಕಾಲ ಅಧಿವೇಶನ ನಡೆಸಬೇಕೆಂದು ಬಿಜೆಪಿ ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಾಲಿ ಶಾಸಕರು ಮೃತಪಟ್ಟ ಕಾರಣ ಒಂದು ದಿನ ಅಧಿವೇಶನ ನಡೆಯುವದಿಲ್ಲ, ಕಾಂಗ್ರೆಸ್ ಪಕ್ಷ ತನ್ನ ಮರ್ಜಿಗೋಸ್ಕರ, ಮಸೂದೆ ಅಂಗೀಕಾರಕ್ಕೆ ಈ ಅಧಿವೇಶನವನ್ನು ಬಳಸಿಕೊಳ್ಳುತ್ತಿದೆ. ಬೆಂಗಳೂರಿನ ವಿಚಾರಗಳನ್ನೇ ಬೆಳಗಾವಿಯಲ್ಲಿ ಕೈಗೆತ್ತಿಕೊಳ್ಳುವುದಾದರೆ ಉತ್ತರ ಕರ್ನಾಟಕದಲ್ಲಿ ಅಧಿವೇಶನ ನಡೆಸುವ ಔಚಿತ್ಯವೇನು? ಹಿಂದೆ ಕುಮಾರಸ್ವಾಮಿ, ಯಡಿಯೂರಪ್ಪ ಮುಖ್ಯಮಂತ್ರಿಗಳಾಗಿದ್ದಾಗ ಅಲ್ಲೊಂದು ಭವನ ಆಗಬೇಕು, ಉತ್ತರ ಕರ್ನಾಟಕದ ಚರ್ಚೆ ಆಗಬೇಕೆಂದು ಅಧಿವೇಶನ ಮಾಡುತ್ತಿದ್ದರು. 20 ದಿನವಾದರೂ ಬೆಳಗಾವಿಯಲ್ಲಿ ಅಧಿವೇಶನ ನಡೆಸಿ, ಇಲ್ಲಿನ ಸಮಸ್ಯೆಗಳನ್ನು ಚರ್ಚಿಸಿ ಎಂದು ಆಗ್ರಹಿಸಿದ್ದಾರೆ.

ಉತ್ತರ ಕರ್ನಾಟಕದ ವಿಚಾರವನ್ನು ಕೊನೆಗೆ ಪರಿಗಣಿಸುತ್ತಾರೆ. ಹಿಂದಿನ ಅಧಿವೇಶನದಲ್ಲಿ ಕೊನೆಯಲ್ಲಿ ಮುಖ್ಯಮಂತ್ರಿ ಸುಮ್ಮನೇ ಭಾಷಣ ಮಾಡಿ ಹೋಗಿದ್ದರು. ಕೈಗಾರಿಕೆ ಸ್ಥಾಪನೆ, ಶಾಲಾರಂಭ, ನೀರಾವರಿ ಯೋಜನೆಗೆ ಹಣದ ವಿಚಾರದಲ್ಲಿ ಉತ್ತರ ಕರ್ನಾಟಕಕ್ಕೆ ಅನ್ಯಾಯವಾಗುತ್ತಲೇ ಬಂದಿದೆ ಎಂದು ದೂರಿದ್ದಾರೆ.

## 'ಸಂಚಾರ್ ಸಾಥಿ ಆ್ಯಪ್' ಕಡ್ಡಾಯವಲ್ಲ, ಅಳಿಸಬಹುದು: ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಸ್ಪಷ್ಟನೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

'ಸಂಚಾರ್ ಸಾಥಿ' ಅಪ್ಲಿಕೇಶನ್ ಅನ್ನು ಸಕ್ರಿಯಗೊಳಿಸುವುದು ಕಡ್ಡಾಯವಲ್ಲ, ನಿಮಗೆ ಬೇಡವೆಂದಾಗ ಅದನ್ನು ಅಳಿಸಬಹುದು ಎಂದು ದೂರ ಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಮಂಗಳವಾರ ಸ್ಪಷ್ಟನೆ ನೀಡಿದ್ದಾರೆ.

## ಗದಗದಲ್ಲಿ ಚಿರತೆ ಪತ್ತೆ ಆಗಿಲ್ಲ; ಸುಳ್ಳು ಸುದ್ದಿ ಹಬ್ಬಿಸಿದರೆ 2 ವರ್ಷ ಜೈಲು ಶಿಕ್ಷೆ, ದಂಡದ ಎಚ್ಚರಿಕೆ ಕೊಟ್ಟ ಅರಣ್ಯ ಇಲಾಖೆ!

■ವಿಜಯಸಾಕ್ಷಿ ಸುದ್ದಿ, ಗದಗ




ನಗರದ ಪಂಚಾಕ್ಷರಿ ಬಡಾವಣೆಯ 6ನೇ ಕ್ರಾಸ್ ಹಾಗೂ ಎಪಿಎಂಸಿ ಬಳಿಯಲ್ಲಿ ನವೆಂಬರ್ 25 ಮತ್ತು 26ರಂದು ಚಿರತೆ ಕಾಣಿಸಿಕೊಂಡಿರುವುದು ಸ್ಥಳೀಯ ಸಿಸಿಟಿವಿಯಲ್ಲಿ ದೃಢಪಟ್ಟಿದೆ.

ಮಾಹಿತಿ ತಿಳಿದ ತಕ್ಷಣ ಅರಣ್ಯ ಇಲಾಖೆ ಕುಂಚಿಂಗ್ ಆಪರೇಷನ್ ನಡೆಸಿ ಹಲವು ಕಡೆ ಹುಡುಕಾಟ ನಡೆಸಿದರೂ ಯಾವುದೇ ಕುರುಹು ಪತ್ತೆಯಾಗಿಲ್ಲ.

ಅರಣ್ಯ ಅಧಿಕಾರಿಗಳ ಪ್ರಕಾರ, ಕಳೆದ ಹಲವು ದಿನಗಳಿಂದ ಯಾವುದೇ ಹೆಜ್ಜೆಗುರುತು, ಚಲನವಲನ, ಸಿಸಿಟಿವಿ ದೃಶ್ಯಾವಳಿ ಯಾವುದೂ ಸಿಕ್ಕದೇ ಇರುವುದರಿಂದ ಚಿರತೆ ಅರಣ್ಯಕ್ಕೆ ಹಿಂತಿರುಗಿರಬಹುದು ಎಂದು ನಂಬಲಾಗಿದೆ. ಆದ್ದರಿಂದ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲವೆಂದು ಪ್ರಕಟಣೆ ಜಾರಿಯಾಗಿದೆ.

ಇನ್ನೊಂದೆಡೆ, "ಚಿರತೆಯನ್ನು ಬೆಟಗೇರಿಯಲ್ಲಿ ಹಿಡಿದಿದ್ದಾರೆ" ಎಂಬ ಸುಳ್ಳು ಸುದ್ದಿ ಸಾಮಾಜಿಕ ಜಾಲತಾಣಗಳಲ್ಲಿ ಹರಡುತ್ತಿದ್ದು, ಇದು ಸಂಪೂರ್ಣ ತಪ್ಪು ಎಂದು ಅರಣ್ಯ ಅಧಿಕಾರಿಗಳು ತಿಳಿಸಿದ್ದಾರೆ. ಸುಳ್ಳು ಸುದ್ದಿ ಹಬ್ಬಿಸಿದವರ ವಿರುದ್ಧ ಭಾರತೀಯ ನ್ಯಾಯ ಸಂಹಿತೆ 2023ರ ಸೆಕ್ಷನ್ 240 ಅಡಿಯಲ್ಲಿ 2 ವರ್ಷಗಳ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ.

ಅರಣ್ಯ ಇಲಾಖೆಯು ಸಹಾಯವಾಣಿ ಸಂಖ್ಯೆಗಳನ್ನು ಬಿಡುಗಡೆ ಮಾಡಿದ್ದು, ಸಂಪರ್ಕಿಸಲು ಮನವಿ ಮಾಡಲಾಗಿದೆ.

ಕಾಡು ಪ್ರಾಣಿ ಕಂಡುಬಂದರೆ ತಕ್ಷಣ ಸಂಪರ್ಕಿಸಬೇಕು: 1926, 8151020753, 6362718315, 9611758153

## ನೋಟರಿಯಾಗಿ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದ ನಿವಾಸಿ, ವಕೀಲರಾದ ಸುರೇಶ ಬಿಸನಳ್ಳಿ ಅವರು ನೋಟರಿಯಾಗಿ ನೇಮಕಗೊಂಡಿದ್ದಾರೆ. ಸುರೇಶ ಬಿಸನಳ್ಳಿ ಅವರು ಕಳೆದ ಹನ್ನೆರಡು ವರ್ಷಗಳಿಂದ ಗದಗನಲ್ಲಿ ವಕೀಲರಾಗಿ ಕಾರ್ಯನಿರ್ವಹಿಸುತ್ತಿದ್ದು, ಇದೀಗ ಕರ್ನಾಟಕ ರಾಜ್ಯ ಸರ್ಕಾರವು ಅವರನ್ನು ನೋಟರಿಯಾಗಿ ನೇಮಕ ಮಾಡಿದೆ.



**ಅಭಿನಂದನೆ:** ನೂತನವಾಗಿ ನೋಟರಿಯಾಗಿ ನೇಮಕಗೊಂಡ ಸುರೇಶ ಬಿಸನಳ್ಳಿ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ರೋಣ ಶಾಸಕರಾದ ಜಿ.ಎಸ್. ಪಾಟೀಲ, ಗದಗ ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ವಿ.ಆರ್. ಗುಡಿಸಾಗರ, ಗದಗ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ, ನ್ಯಾಯವಾದಿ ಹಾಗೂ ಕರ್ನಾಟಕ ವಕೀಲರ ಪರಿಷತ್‌ನ ವಕೀಲರ ಕಲ್ಯಾಣ ನಿಧಿ ಸದಸ್ಯ ಎಸ್.ಕೆ. ನದಾಫ್ ಸೇರಿ ಎಲ್ಲ ಹಿರಿಯ-ಕಿರಿಯ ನ್ಯಾಯವಾದಿಗಳು ಅಭಿನಂದಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka